ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

RNI No: KARKAN/2014/54928 www.sahayavani.com

ದಶಕದ ನಡಿಗೆ.... ನೊಂದವರ ಧ್ವನಿ

# ಸಹಾಯ ವಾಣಿ

SAHAYAVANI KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ : 10
Vol:10
ಸಂಚಿಕೆ : 32
Issuse:32
ದಿನಾಂಕ : 27–06–2023
Date:27-06-2023
ಮಂಗಳವಾರ. TUESDAY
ಪುಟ:4, Page:4
ರೂ: 3–00 Rs:3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪ ಸಂಪಾದಕರು: ಸುಚಿತ್ರ ಎಸ್.ಒಡೆಯರ್, MBA ಗೌರವ ಸಂಪಾದಕರು: ಗುರುರಾಜು .ಎಂ Ph:080-35893144 Cell: 9902543494 E-mail:sahayavany@gmail.com

## ಪ್ರತಿ ಜೀವಿಗೂ ಬದುಕುವ ಹಕ್ಕಿದೆ:ಅರಣ್ಯ, ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ

**ಬೆಂಗಳೂರು** : ಅರಣ್ಯ ಮತ್ತು ಮೃಗಪಕ್ಷಿಗಳು ಅನಾದಿ ಕಾಲದಿಂದಲೂ ನಮ್ಮ ಸಂಸ್ಕೃತಿ, ಧರ್ಮದ ಭಾಗವಾಗಿದೆ. ಈ ಬ್ರಹ್ಮಾಂಡದಲ್ಲಿ ಎಲ್ಲ ಜೀವಿಗಳಿಗೂ ಬದುಕುವ ಸಮಾನ ಅವಕಾಶವಿದೆ, ಹಕ್ಕಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.ವಿಧಾನಸೌಧದಲ್ಲಿಂದು ಅರಣ್ಯ ಇಲಾಖೆಯ ಲಾಂಛನ (ಲೋಗೋ) ಬಿಡುಗಡೆ ಮಾಡಿ ಮಾತನಾಡಿದ ಅವರು, ಜನರ ಆಶೀರ್ವಾದದಿಂದ ಹೊಸ ಸರ್ಕಾರ ಬಂದಿದೆ. ರಾಜ್ಯದೆಲ್ಲೆಡೆ ಹೊಸ ಹುರುಪು ಮೂಡಿದೆ. ಈ ಸಂದರ್ಭದಲ್ಲಿ ಅರಣ್ಯ ಇಲಾಖೆಗೂ ಹೊಸ ಹುರುಪು ನೀಡಲು ಲಾಂಛನ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.ಅರಣ್ಯ ಸಚಿವಾಲಯ ಹಲವು ದಶಕಗಳಿಂದ ಅಸ್ತಿತ್ವದಲ್ಲಿದೆ. ಆದರೆ ಈ ಇಲಾಖೆಗೆ ತನ್ನದೇ ಆದ ಸ್ವಂತ ಲಾಂಛನ ಇರಲಿಲ್ಲ. ಈಗ ಆ ಕಾಲ ಕೂಡಿ ಬಂದಿದೆ. ಇಲಾಖೆಯ ಉದ್ದೇಶ, ಮೌಲ್ಯಗಳು ಮತ್ತು ಕಾರ್ಯವನ್ನು ಪ್ರತಿನಿಧಿಸುವ ರೀತಿಯಲ್ಲಿ ಲಾಂಛನವನ್ನು ರೂಪಿಸಲಾಗಿದೆ ಎಂದರು. ಇಲಾಖೆಯ ಲಾಂಛನವು ಸಮಾಜದಲ್ಲಿ ವಿಶಿಷ್ಟ ಅಸ್ಮಿತೆ ಸ್ಥಾಪಿಸುತ್ತದೆ. ಜನರಲ್ಲಿ ಅರಣ್ಯ ಇಲಾಖೆಯ ಬಗ್ಗೆ ಹೆಮ್ಮೆ ಮೂಡಿಸಲು ನೆರವಾಗುತ್ತದೆ. ಇನ್ನು ಮುಂದೆ ಇಲಾಖೆಯ ಅಧಿಕೃತ ವೆಬ್‌ಸೈಟ್, ಸಾಮಾಜಿಕ ಮಾಧ್ಯಮ ತಾಣಗಳು, ಮತ್ತು ಪ್ರಚಾರ ಸಾಮಗ್ರಿಗಳಲ್ಲಿಈ ಲೋಗೋ ಬಳಸಲಾಗುವುದು ಎಂದು ತಿಳಿಸಿದರು.ಕರ್ನಾಟಕ ಅರಣ್ಯ ಇಲಾಖೆಯ ಕಾರ್ಯ, ಉದ್ದೇಶವನ್ನು ಬಿಂಬಿಸುವಂತಹ ತನ್ನದೇ ಆದ ಲಾಂಛನ ಅಳವಡಿಸಿಕೊಳ್ಳಲು ನಿರ್ಧರಿಸಿ ಕಳೆದ ವರ್ಷ ವಿದ್ಯಾರ್ಥಿಗಳನ್ನು, ಕಲಾವಿದರು ಮತ್ತು ಸಾರ್ವಜನಿಕರಿಂದ ಲಾಂಛನ ರಚಿಸುವಂತೆ ಕೋರಿ ಲೋಗೋ ವಿನ್ಯಾಸ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ರಾಜ್ಯಾದ್ಯಂತ ಒಟ್ಟು 309 ಲೋಗೋ ವಿನ್ಯಾಸಗಳು ಬಂದಿದ್ದವು. ಈ ಎಲ್ಲವನ್ನೂ ಪರಿಶೀಲಿಸಲು, ಒಂದು ಸಮಿತಿಯನ್ನು ರಚಿಸಿ, 3 ಹಂತಗಳಲ್ಲಿ ಸ್ಪರ್ಧೆಯನ್ನು ನಡೆಸಿ, ಅಂತಿಮವಾಗಿ ಈ



ಲೋಗೋ ಆಯ್ಕೆ ಮಾಡಲಾಗಿದೆ ಎಂದರು.ಬಹುಮಾನದ ಮೊತ್ತ 50 ಸಾವಿರ : ಸ್ಪರ್ಧೆಯ ವಿಜೇತ ಮೈಸೂರಿನ ಶಮಂತ್ ಗೊರೂರು ಅವರಿಗೆ 20 ಸಾವಿರ ರೂ. ನಗದು ಬಹುಮಾನ, ಪ್ರಮಾಣ ಪತ್ರವನ್ನೂ ಸಚಿವರು ಇದೇ ವೇಳೆ ಪ್ರದಾನ ಮಾಡಿದರು. ಈ ಮೊತ್ತವನ್ನು 50 ಸಾವಿರಕ್ಕೆ ಹೆಚ್ಚಿಸುವುದಾಗಿಯೂ ಪ್ರಕಟಿಸಿದರು.ನಮ್ಮ ರಾಷ್ಟ್ರ ಲಾಂಛನದಲ್ಲೂ ನಾಲ್ಕು ಮುಖದ ಸಿಂಹ ಇದೆ. ನಮ್ಮ ರಾಜ್ಯದ ಲಾಂಛನದಲ್ಲೂ ಸಿಂಹ ಇದೆ. ಜೊತೆಗೆ ಸಿಂಹದ ದೇಹ ಮತ್ತು ಸೊಂಡಿಲಿರುವ ಕಾಲ್ಪನಿಕ ಮೃಗವೂ ಇದೆ. ಹಸಿರೂ ಇದೆ ಮಿಗಿಲಾಗಿ ಗಂಡ ಬೇರುಂಡ ಪಕ್ಷಿ ಇದೆ. ವಿಧಾನಸೌಧದ ಗೋಪುರದಲ್ಲೂ ಸಿಂಹ ಲಾಂಛನವಿದೆ. ಅಂದರೆ ವನ್ಯಮೃಗಗಳು ನಮ್ಮ ಆಡಳಿತದಲ್ಲಿ ಹಾಸು ಹೊಕ್ಕಾಗಿವೆ ಎಂದರೆ ತಪ್ಪಾಗಲಾರದು ಎಂದರು.ಕರ್ನಾಟಕ ನಕ್ಷೆಯ ಆಕಾರದಲ್ಲಿರುವ ಲಾಂಛನದಲ್ಲಿ ರಾಷ್ಟ್ರೀಯ ಪ್ರಾಣಿ ಹುಲಿ, ರಾಜ್ಯಪಕ್ಷಿ ನೀಲಕಂಠ, ರಾಜ್ಯ ಪ್ರಾಣಿ ಆನೆ, ರಾಜ್ಯದ ಹಿರಿಮೆ ಮತ್ತು ಗರಿಮೆಯಾದ ಶ್ರೀಗಂಧ, ರಾಜ್ಯ ಚಿಟ್ಟೆ ಸೌಥೆರ್ನ್ ಬರ್ಡ್ ವಿಂಗ್, ಮತ್ತು ಇವೆಲ್ಲಕ್ಕೂ ಮೂಲಾಧಾರವಾದ ಜಲಸಂಪನ್ಮೂಲವಿದ್ದು ಇಲಾಖೆಯನ್ನು ಸೂಕ್ತವಾಗಿ ಪ್ರತಿನಿಧಿಸುತ್ತದೆ ಎಂದರು.

## ಬಿಜೆಪಿಯಲ್ಲಿ ಹೊರಗಿನವರು, ಒಳಗಿನವರು ಎನ್ನುವ ತಾರತಮ್ಯವಿಲ್ಲ: ರವಿಕುಮಾರ್

**ಬೆಂಗಳೂರು:** ಕಾಂಗ್ರೆಸ್ ಪಕ್ಷದ ನಾಯಕ ರನ್ನು ಬಿಜೆಪಿಗೆ ಕರೆದುಕೊಂಡು ಬಂದ ಕಾರಣಕ್ಕಾಗಿಯೇ ನಾವು ಇಂದು ಈ ಪರಿಸ್ಥಿತಿ ಎದುರಿಸಬೇಕಾಗಿ ಬಂದಿದೆ ಎನ್ನುವ ಮಾಜಿ ಡಿಸಿಎಂ ಕೆ. ಎಸ್. ಈಶ್ವರಪ್ಪ ಹೇಳಿಕೆಯನ್ನು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ರವಿಕುಮಾರ್ ತಳ್ಳಿಹಾಕಿದ್ದಾರೆ.

## ಮಂಗಳಮುಖಿ ಸಮುದಾಯ ಮುಖ್ಯವಾಹಿನಿಗೆ ಬರಲು ಸೂಕ್ತ ಪ್ರೋತ್ಸಾಹ ಅವಶ್ಯ:ರಾಜರತನ್ ಕುಲಕರ್ಣಿ

**ದಾವಣಗೆರೆ:**ಸುಯೆಜ್ ಕಂಪನಿ ಹಾಗೂ ಅಭಯ ಸ್ಪಂದನ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಮಂಗಳಮುಖಿ ಸಮುದಾಯದ ಸದಸ್ಯರಿಗೆ ಎಲ್.ಜಿ.ಬಿ.ಟಿ.ಕ್ಯೂ.ಎ.ಐ ವಿಷಯದ ಕುರಿತಾಗಿ ಜಾಗೃತಿ ಕಾರ್ಯ ಕ್ರಮವನ್ನು ನಗರದ ದೇವರಾಜ್ ಅರಸ್ ಬಡಾವಣೆಯ ಅಭಯ ಸ್ಪಂದನ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.ಕಾರ್ಯಕ್ರಮದ ಉದ್ಘಾಟ ನೆಯನ್ನು ನೆರವೇರಿಸಿದ ಸುಯೆಜ್ ಕಂಪನಿಯ ಮುಖ್ಯಸ್ಥರಾದ ರಾಜರತನ್ ಕುಲಕರ್ಣಿ " ದಾವಣಗೆರೆ ಜಿಲ್ಲೆಯಾದ್ಯಂತ ಮಂಗಳಮುಖಿ ಸಮಾಜದ ಸದಸ್ಯರನ್ನು ಸಂಘಟಿಸಿ ಅವರಿಗೆ ತರಬೇತಿ ಹಾಗೂ ಇನ್ನಿತರ ಮಾಹಿತಿ ಸೇವೆಗಳನ್ನು ನೀಡುತ್ತಿರುವ ಅಭಯ ಸ್ಪಂದನ ಸಂಸ್ಥೆಯ ಕಾರ್ಯ ಶ್ಲಾಘನೀಯ" ಎಂದು ಅಭಿಪ್ರಾಯ ಪಟ್ಟರು. ಸುಯೆಜ್ ಕಂಪನಿಯ ಸಾಮಾಜಿಕ ಜವಾಬ್ದಾರಿಯಡಿ ಹಮ್ಮಿಕೊಳ್ಳುವ ಸಮಾಜಮುಖಿ ಕಾರ್ಯಕ್ರಮಗಳು ಬಗ್ಗೆ ವಿವರಿಸಿದರು. ಹಾಗೆಯೇ ಸುಯೆಜ್




ಕಂಪನಿಯು ಜೂನ್ ತಿಂಗಳನ್ನು ಎಲ್.ಜಿ.ಬಿ.ಟಿ.ಕ್ಯೂ.ಎ.ಐ ಹೆಮ್ಮೆಯ ತಿಂಗಳೆಂದು ಆಚರಿಸುತ್ತಿದೆ ಎಂದು ತಿಳಿಸಿದರು. ಕಾರ್ಯ ಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಅಭಯ ಸ್ಪಂದನ ಸಂಸ್ಥೆಯ ಯೋಜನಾ ನಿರ್ದೇಶಕರಾದ ಚೈತ್ರ ಎಸ್ ದಶಕಗಳ ಹಿಂದೆ ಮಂಗಳ ಮುಖಿ ಸಮುದಾಯದವರು ಮುಖ್ಯವಾಹಿನಿಯಿಂದ ತಿರಸ್ಕೃತರಾಗುತ್ತಿದ್ದು ಕಂಡು ಬರುತ್ತಿತ್ತು. ಆದರೆ ಇಂದು ಪರಸ್ಥಿತಿ ಹಾಗಿಲ್ಲ ಸುಯೆಜ್‌ನಂತಹ ಹಲವಾರು ಸಂಸ್ಥೆಗಳು ನಮ್ಮ ಭಾವನೆಗಳನ್ನು ಅರಿಯ ಲು ಮುಂದೆ ಬಂದಿವೆ ಹಾಗೂ ಮಂಗಳಮುಖಿ ಸಮಾಜದಲ್ಲೂ ಸುಶಕ್ಷಿತರಿದ್ದು ಸೂಕ್ತ ಮಾರ್ಗದರ್ಶನ ಹಾಗೂ ಉದ್ಯೋಗಗಳ ಅವಕಾಶಕ್ಕಾಗಿ ಕಾಯುತ್ತಿದ್ದಾರೆ. ಯಾವುದೇ ಸಂಸ್ಥೆ/ಸಂಘಗಳು ತಾವು ಉದ್ಯೋಗ ಅವಕಾಶಗಳನ್ನು ನೀಡುವ ಅವಕಾಶಗಳಿದ್ದಲ್ಲಿ ಅಭಯ ಸ್ಪಂದನಾ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಅಧಿಕಾರಿ ವರ್ಗದವರನ್ನು ಸಂಪರ್ಕಿಸಿ ಮಂಗಳ ಮುಖಿ ಸಮುದಾಯಕ್ಕೆ ಬೆಂಬಲ ನೀಡಬ ಹುದೆಂದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸುಯೆಜ್ ಸಂಸ್ಥೆಯ ಅಧಿಕಾರಿಗಳಾದ ಸಂದೀಪ್, ರೇಖಾ, ಶಿಲ್ಪಾ, ಮಂಜುನಾಥ ಜೊತೆಗೆ ಅಭಯ ಸ್ಪಂದನ ಸಂಸ್ಥೆಯ ಕಾರ್ಯಕ್ರಮ ವ್ಯವಸ್ಥಾಪಕ ಚಂದ್ರಶೇಖರ ನಾಯ್ಕ, ಅಧಿಕ್ಷಕಿ ಗೀತಾ, ಸಮಾಲೋಚಕ ಮಂಜುನಾಥ, ಸಂಘಟಕ ಸ್ಟೀಪನ್ ರಾಜ್ ಮುಂತಾದವರು ಉಪಸ್ಥಿತರಿದ್ದರು.

## ರಾಷ್ಟ್ರಮಟ್ಟ ಕುಸ್ತಿಯಲ್ಲಿ ಕಿರಣಗೆ ಕಂಚಿನ ಪದಕ



**ಹರಿಹರ:**ದೆಹಲಿಯ ಯುನಿವರ್ಸಿಟಿಯಲ್ಲಿ ನಡೆದ ರಾಷ್ಟ್ರಮಟ್ಟ ಕುಸ್ತಿ ಕ್ರೀಡೆಯಲ್ಲಿ ದಾವಣಗೆರೆ ಶಾಲೆಯ ಕ್ರಿಡಾಪಟು ಬಿಎಚ್ ಕಿರಣ್ ಗೆ ತೃತೀಯ ಸ್ಥಾನದಲ್ಲಿ ಕಂಚಿನ ಪದಕ ಪಡೆದು ರಾಜ್ಯ ಮತ್ತು ಜಿಲ್ಲೆ ತಾಲೂಕಿಗೆ ಕೀರ್ತಿ ತಂದಿದ್ದಾನೆ.ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಎಲ್ಲಾ ವ್ಯಾಯಾಮ ಶಾಲೆಯ ಕ್ರೀಡಾಪಟುಗಳು ಕ್ರೀಡಾ ಅಭಿಮಾನಿಗಳು ಚುನಾಯಿತ ಪ್ರತಿನಿಧಿಗಳು ಹರಿಹರದ ಜನತೆ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



**ದಾವಣಗೆರೆ:**ದಾವಣಗೆರೆಯ ನಿಜಲಿಂಗಪ್ಪ ಬಡಾವಣೆಯಲ್ಲಿರುವ ಎ.ಆರ್.ಎಂ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರದ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಮಾದಕ ವ್ಯಸನ ಮತ್ತು ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ಈ ವೇಳೆಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸದಸ್ಯ ಕಾರ್ಯದರ್ಶಿ ಮಹಾವೀರ. ಮ. ಕರಣ್ಣವರ, ಎ.ಆರ್.ಎಂ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರದ ಪ್ರಾಂಶುಪಾಲರಾದ ಎಂ.ಡಿ ಅಣ್ಣಯ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ನಾಗರಾಜ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಎಚ್ ಅರುಣ್ ಕುಮಾರ್ ಮತ್ತಿತರರಿದ್ದರು.

## ಹಿರಿಯ ರಾಜಕಾರಣಿ ಬಿ.ಕೆ.ಹರಿಪ್ರಸಾದ್ ಗೆ ಸೂಕ್ತ ಸ್ಥಾನಮಾನ ನೀಡಲು ಒತ್ತಾಯ

**ದಾವಣಗೆರೆ:** ರಾಜ್ಯದಲ್ಲಿ 70 ಲಕ್ಷ ಜನಸಂಖ್ಯೆ ಹೊಂದಿರುವ ಈಡಿಗ ಸಮುದಾಯಕ್ಕೆ ಅಗತ್ಯವಾಗಿ ಬೇಕಾಗಿರುವ 11 ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ರಾಷ್ಟ್ರೀಯ ಈಡಿಗ ಮಹಾಮಂಡಳಿ, ಕರ್ನಾಟಕ, ರಾಷ್ಟ್ರೀಯ ಈಡಿಗ ಬಿಲ್ಲವ ಮಹಾಮಂಡಳಿ, ರಾಷ್ಟ್ರೀಯ ಈಡಿಗ ದೀವರ ಮಹಾಮಂಡಳಿ, ರಾಷ್ಟ್ರೀಯ ಈಡಿಗ ನಾಮಧಾರಿ ಮಹಾಮಂಡಳಿ ಸಂಘಟನೆಗಳು ಜಂಟಿಯಾಗಿ ರಾಜ್ಯದ ಮುಖ್ಯಮಂತ್ರಿಯನ್ನು ಆಗ್ರಹಿಸಿವೆ.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಪ್ರಧಾನ ಕಾರ್ಯದರ್ಶಿ ಡಾ.ಮಂಚೇಗೌಡ, ನಮ್ಮ ಸಮುದಾಯದ ಹಿರಿಯ ರಾಜಕಾರಣಿ ಬಿ.ಕೆ.ಹರಿಪ್ರಸಾದ್ ಅವರಿಗೆ ಸೂಕ್ತ ಸ್ಥಾನಮಾನ ನೀಡಬೇಕು. ಸಮಾಜದ ಸಂಘಟನೆ ದೃಷ್ಟಿಯಲ್ಲಿ ರಾಜ್ಯದ ಎಲ್ಲಾ




ಜಿಲ್ಲೆಗಳಲ್ಲಿಯೂ ಕುಲಬಾಂಧವರ ಚಿಂತನ ಶಿಬಿರ, ಸಾಮಾಜಿಕ, ರಾಜಕೀಯದ ಅರಿವು ಮಾಡಿಸಬೇಕು. ಕಾಂಗ್ರೆಸ್ ಪಕ್ಷ ಘೋಷಿಸಿದಂತೆ ಬ್ರಹ್ಮ ನಾರಾಯಣ ಗುರು ಈಡಿಗ ನಿಗಮಕ್ಕೆ ವರ್ಷಕ್ಕೆ 250 ಕೋಟಿ ನೀಡಬೇಕು. ಅಲ್ಲದೇ ಬ್ರಹ್ಮಶ್ರೀ ನಾರಾಯಣ ಗುರು ಈಡಿಗ ನಿಗಮಕ್ಕೆ ಅಧ್ಯಕ್ಷರು ಹಾಗೂ ಸದಸ್ಯರನ್ನು ಆಯ್ಕೆ ಮಾಡಬೇಕು ಎಂದು ಹೇಳಿದರು.ಹಿಂದಿನ ಸರ್ಕಾರ ಆದೇಶ ಮಾಡಿದ್ದ ಕುಲಶಾಸ್ತ್ರ ಅಧ್ಯಯನವನ್ನು ಕೂಡಲೇ ಪ್ರಾರಂಭ ಮಾಡಬೇಕು. ಈಡಿಗ ಸಮಾಜವನ್ನು ಎಸ್ ಟಿ ಮೀಸಲಾತಿಗೆ ಸೇರಿಸುವುದಕ್ಕೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಬೇಕು. ಕುಲಕಸುಬು ಸೇಂದಿ ಹಾಗೂ ನೀರಾ ವಿಷಯದಲ್ಲಿ ಅಂತಿಮ ನಿರ್ಣಯ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಬ್ರಹ್ಮ ಶ್ರೀ ನಾರಾಯಣ ಗುರು ಪುತ್ಥಳಿಯನ್ನು ಬೆಂಗಳೂರಿನ ವಿಧಾನಸೌಧದಲ್ಲಿ ಸ್ಥಾಪಿಸಬೇಕು. ಬ್ರಹ್ಮಶ್ರೀ ನಾರಾಯಣ ಗುರು ಹೆಸರಿನಲ್ಲಿ ನಮ್ಮ ಸಮುದಾಯದ ಮಕ್ಕಳ ಉನ್ನತ ಶಿಕ್ಷಣಕ್ಕಾಗಿ ಐಎಎಸ್, ಐಪಿಎಸ್, ಕೆಎಎಸ್ ತರಬೇತಿ ಕೇಂದ್ರಗಳನ್ನು ಶಿವಮೊಗ್ಗ, ಉತ್ತರ ಕನ್ನಡ ಹಾಗೂ ಮಂಗಳೂರು ಜಿಲ್ಲೆಯಲ್ಲಿ ಪ್ರಾರಂಭಿಸಬೇಕು. 12ನೇ ಶತಮಾನದಲ್ಲಿ ಅನುಭವ ಮಂಟಪದಲ್ಲಿ ಗುರುತಿಸಿಕೊಂಡಿರುವ ಶ್ರೀಹೆಂಡದ ಮಾರಯ್ಯನವರ ಜಯಂತಿಯನ್ನು ಆಚರಣೆ ಮಾಡಬೇಕು ಎಂದರು.ಈಡಿಗ ಸಮುದಾಯದ ಧಾರ್ಮಿಕ ಕ್ಷೇತ್ರವಾದ ಸಿಗಂದೂರು ಚೌಡೇಶ್ವರಿ ದೇವಸ್ಥಾನಕ್ಕೆ ಇರುವ ಕಾನೂನು ಗೊಂದಲಗಳನ್ನು ದೂರ ಮಾಡಿ ದೇವಸ್ಥಾನವನ್ನು ಧರ್ಮದರ್ಶಿ ಡಾ.ರಾಮಪ್ಪ ನೇತೃತ್ವದಲ್ಲಿ ಸುಸೂತ್ರವಾಗಿ ನಡೆಸಲು ಅವಕಾಶ ಮಾಡಬೇಕು. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿಯೂ ನಾರಾಯಣ ಗುರುಗಳ ಸಿದ್ಧಾಂತಗಳನ್ನು ಬೋಧಿಸಲು ಪಠ್ಯದಲ್ಲಿ ಅಳವಡಿಸಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕು. ನಿರ್ಲಕ್ಷ್ಯ, ವಿಳಂಬ ಮಾಡಿದರೆ ರಾಜಾದ್ಯಂತ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಹೆಚ್.ವೈ. ಆನಂದ, ಆರ್.ಪ್ರತಾಪ್, ಟಿ.ಆರ್. ಜ್ಞಾನದೇವ, ಪಿ.ಪಿ.ಪ್ರಕಾಶ್, ಕೆ.ಉದಯ್ ಕುಮಾರ್, ನವೀನ್ ಕುಮಾರ್ ಇತರರು ಇದ್ದರು.

## ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಮಾರೋಪ ಸಮಾರಂಭ




**ದಾವಣಗೆರೆ:**ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸಂಜೆ ಕಾಲೇಜು, ಸ್ನಾತಕ ಮತ್ತು ಸ್ನಾತಕೋತ್ತರ ಕೇಂದ್ರದ 2022–2023ನೇ ಸಾಲಿನ ಸಾಂಸ್ಕೃತಿಕ ಕ್ರೀಡೆ, ಎನ್.ಎಸ್.ಎಸ್, ಎನ್.ಸಿ.ಸಿ, ಯುವ ರೆಡ್ ಕ್ರಾಸ್ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ನಾಳೆ ಬೆಳಿಗ್ಗೆ 10:30ಕ್ಕೆ ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ನೇರವೇರಿಸಲಿದ್ದಾರೆ.

ಸಮಾರೋಪ ಭಾಷಣ ವನ್ನು ವಿಶ್ರಾಂತ ನ್ಯಾಯಾಧೀ ಶರಾದ ಹೆಚ್. ಬಿಲ್ಲಪ್ಪ ಮಾಡ ಲಿದ್ದಾರೆ .ವಿಶೇಷ ಆಹ್ವಾನಿತರಾಗಿ ಪ್ರೊ.ಓಂಪ್ರಕಾಶ್ ರಾಜೋಳೆ ಆಗಮಿಸಲಿದ್ದಾರೆ .ಮುಖ್ಯ ಅತಿಥಿಗಳಾಗಿ ಪಾಲಿಕೆ ಸದಸ್ಯ ಗಡಿಗುಡಾಳ್ ಮಂಜುನಾಥ್ ,ಸಂಜೆ ಕಾಲೇಜು ಪ್ರಾಂಶುಪಾ ಲರಾದ ಡಾ. ಕೊಟ್ರಪ್ಪ.ಸಿ.ಕೆ. ,ಡಾ. ನಾರಾಯಣಸ್ವಾಮಿ ಕೆ, ಶ್ರೀಮತಿ ಗೀತಾದೇವಿ.ಟಿ. ಆಗಮಿಸಲಿದ್ದಾರೆ. .ಪ್ರಾಂಶುಪಾಲರಾದ ಪ್ರೊ. ಅಂಜನಪ್ಪ ಎಸ್. ಆರ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರೊ. ಭೀಮಣ್ಣ ಸುಣಗಾರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರ್ಕಿ ಸರ್ಕಾರಿ ಪ್ರೌಢಶಾಲೆಗೆ ಕುಡಿಯುವ ನೀರಿನ ಫಿಲ್ಟರ್ ಕೊಡುಗೆ.

**ದಾವಣಗೆರೆ:**ಗ್ರಾಮೀಣ ಪ್ರದೇಶದಲ್ಲಿ ಗುಣಾತ್ಮಕ ಶಿಕ್ಷಣ ನೀಡುತ್ತಿರುವ ಕುರ್ಕಿ ಸರ್ಕಾರಿ ಪ್ರೌಢಶಾಲೆಗೆ ದಾವಣಗೆರೆಯ ಎ ಪಿ ಐ ಮತ್ತು ಸಿ ಸಿ ಎಸ್ ನ ಮಾಜಿ ನಿರ್ದೇಶಕರಾದ ಕುರ್ಕಿ ಕೆ ಜಿ ವೇದ ಮೂರ್ತಿ ಗೌಡ್ರು 25 ಸಾವಿರ ರೂಪಾಯಿ ಮೌಲ್ಯದ ಕುಡಿಯುವ ನೀರಿನ ಫಿಲ್ಟರ್ ನ್ನು ನಿನ್ನೆ ಕೊಡುಗೆಂಯಾಗಿ ನೀಡುವುದರೊಂದಿಗೆ ಈ ಶಾಲೆಯಲ್ಲಿ ಓದುತ್ತಿರುವ 160 ಮಕ್ಕಳಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿಕೊಟ್ಟಿದ್ದಾರೆ.ಅವರಿಗೆ ಶಾಲಾ ಶಿಕ್ಷಕ ವೃಂದ, ಶಾಲಾಭಿವೃದ್ಧಿ ಸಮಿತಿ ಹಾಗೂ ಮಕ್ಕಳು, ಪೋಷಕರು ಅಭಿನಂದನೆ ಸಲ್ಲಿಸಿದ್ದಾರೆ.

## ಬಕ್ರಿದ್ ಹಬ್ಬ ಶಾಂತಿಯಿಂದ ಆಚರಣೆ ಮಾಡಲು ಕರೆ

**ಹರಿಹರ:**ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸದಾ ಸಿದ್ಧವಾಗಿದ್ದು, ಯಾವುದೇ ಅಹಿತಕರ ಘಟನೆ ಆಗದಂತೆ ಶಾಂತತೆಯಿಂದ ಪವಿತ್ರ ಬಕ್ರೀದ್ ಹಬ್ಬ ಆಚರಿಸಬೇಕು ಎಂದು ನಗರ ಠಾಣೆ ಇನ್ಸ್ ಪೆಕ್ಟರ್ ದೇವಾನಂದ ಎಸ್ ಹೇಳಿದರು. ನಗರ ಠಾಣೆ ಸಭಾಂಗಣದಲ್ಲಿ ಶಾಂತಿ ಸೌಹಾರ್ದ ಸಭೆಯಲ್ಲಿ ಮಾತನಾಡಿದ ಅವರು ನಮ್ಮ ದೇಶವು ಎಲ್ಲಾ ಧರ್ಮಗಳನ್ನು ಸಮಾನವಾಗಿ ಕಾಣುವ ಜಾತ್ಯಾತೀತ ರಾಷ್ಟ್ರವಾಗಿದೆ ಹಬ್ಬಗಳು ಶಾಂತಿ ಸಾಮರಸ್ಯದ ಪ್ರತೀಕವಾಗಿವೆ ಹರಿಹರ ತಾಲೂಕು ಶಾಂತಿಗೆ ಹೆಸರುವಾಸಿಯಾಗಿದ್ದು ಪ್ರತಿಯೊಬ್ಬರೂ ಕಾನೂನಾತ್ಮಕವಾಗಿ ನಡೆದುಕೊಂಡು ಇನ್ನೊಬ್ಬರ ಧಾರ್ಮಿಕತೆಗೂ ಧಕ್ಕೆಯಾಗದಂತೆ ನಡೆದುಕೊಳ್ಳಬೇಕು ಸರ್ಕಾರದ ಆದೇಶ ಪ್ರತಿಯೊಬ್ಬರು ಪಾಲಿಸಬೇಕು ಹರಿಹರದ ಜನತೆ ಶಾಂತಿ ಪ್ರಿಯರು ಪೋಲಿಸ್ ಇಲಾಖೆಗೆ ಸದಾ ಸಹಕಾರಿಯಾಗಿರುತ್ತಾರೆ ಮುಂದಿನ ದಿನಗಳಲ್ಲಿ ಎಲ್ಲಾ ಧರ್ಮದವರಿಂದ ಸಹಕಾರ



ವನ್ನು ಇಲಾಖೆ ಬಯಸುತ್ತದೆ ಕಾನೂನು ಸುವಸ್ಥೆಗೆ ಧಕ್ಕೆ ಬಾರದ ರೀತಿಯಲ್ಲಿ ಸಹಕರಿಸಬೇಕು ಯಾವುದೇ ಕಾನೂನು ಬಾಹಿರ ಚಟುವಟಿಕೆಗಳು ಕಂಡು ಬಂದಲ್ಲಿ ಕೂಡಲೇ ಪೊಲೀಸ್ ಇಲಾಖೆಗೆ ಮಾಹಿತಿಯನ್ನು ನೀಡಿ ಯಾವುದೇ ಕಾರಣಕ್ಕೂ ಸಾರ್ವಜ ನಿಕರು ಕಾನೂನು ಕೈಗೆತ್ತಿಕೊಳ್ಳುವ ಕೆಲಸ ಮಾಡಬಾರದು ಯಾವುದೇ ಧರ್ಮದ ಹಬ್ಬ ಹರಿದಿನವಾಗಲಿ ಮತ್ತೊಂದು ಧರ್ಮದ'ವರಿಗೆ ನೋವು ಉಂಟಾಗುವ ರೀತಿ ಯಲ್ಲಿ ಆಚರಿಸಿಕೊಳ್ಳುವುದು ಸರಿಯಲ್ಲ ಇತರರಿಗೆ ಸಮಸ್ಯೆ ಆಗದ ರೀತಿಯಲ್ಲಿ ನಮ್ಮ ಆಚಾರ ವಿಚಾರಗಳು ಕಾರ್ಯ ಚಟುವಟಿಕೆಗಳು ಇದ್ದಲ್ಲಿ ಸಮಾಜಕ್ಕೆ ಯಾವುದೇ ತೊಂದರೆ ಆಗುವುದಿಲ್ಲ ಯಾವುದೇ ಹಿಂತಕರ ಘಟನೆಗಳಿಗೆ ಆಸ್ಪದ ನಡೆದಂತೆ ಹಿಂದೂ ಮುಸ್ಲಿಂ ಹಿರಿಯರು ಮುಖಂಡ ರುಗಳು ಯುವಕರು ಶಾಂತಿ ಸಹಬಾಳ್ವೆ ಯಿಂದ ಪವಿತ್ರ ಬಕ್ರೀದ್ ಹಬ್ಬವನ್ನು ಆಚರಿಸಬೇಕೆಂದು ಕರೆ ನೀಡಿದರು ಹಿರಿಯ ಪತ್ರಕರ್ತ ಪಂಚಾಕ್ಷರಿ ಮಾತನಾಡಿ ಹರಿಹರದಲ್ಲಿ ಎಂದು ಅಹಿತಕರ ಘಟನೆ ನಡೆದಿಲ್ಲಾ ಹರಿ ಮತ್ತು ಹರ ನೆಲೆಸಿರುವ ನಗರ ಶಾಂತಿ ಮತ್ತು ಸೌಹಾರ್ದತೆ ಹೆಸರುವಾಸಿ ನಮ್ಮ ನಗರ ಹೀಗಾಗಿ ಬಕ್ರೀದ್ ಹಬ್ಬ ಆಚರಣೆಯು ಶಾಂತಿ ಯುತವಾಗಿ ಹಿಂದು ಮುಸ್ಲಿಂ ಸಮಾಜದವರು ಆಚರಿಸಬೇಕು ಎಲ್ಲಾ ಸಮಾಜದಲ್ಲು ಕೂಡ ಕಿಡಗೇಡಿಗಳು ಸಮಾಜ ಶಾಂತಿ ಕದಡಲು ಕಾಯುತ್ತಿರುತ್ತಾರೆ ಅಂತಹವರಿಗೆ ಹಿರಿಯ ಮುಖಂಡರು ತಿಳಿಹೇಳಬೇಕು ಆದಾಗಿಯು ಸಮಾಜದಲ್ಲಿ ಶಾಂತಿ ಭಂಗ ಮಾಡಿದರೆ ಪೊಲೀಸ್ ಇಲಾಖೆಯು ನೀರ್ದಾಕ್ಷಿಣಾ ಕಮ ಕೈಗೊಳ್ಳಬೇಕು ಎಂದು ತಿಳಿಸಿದರು ನಗರಸಭಾ ಸದಸ್ಯ ಎ ಬಿ ಎಂ ವಿಜಯ್ ಕುಮಾರ್ ಮಾತನಾಡಿ ಬಕ್ರಿದ ದಾನ ಧರ್ಮದ ಹಬ್ಬವಾಗಿದ್ದು, ಆ ಸಮಯದಲ್ಲಿ ಹಿಂದೂ ಮುಸ್ಲಿಂ ಸಮಾಜದವರು ಒಟ್ಟಾಗಿ ಸೇರಿ ಶಾಂತ ರೀತಿಯಿಂದ ಹಬ್ಬ ಆಚರಿಸಬೇಕು ಎಂದರು.

# ರಾಷ್ಟ್ರೀಯ ಸ್ಥಿರತೆಗೆ ರಷ್ಯಾಗೆ ಚೀನಾ ಬೆಂಬಲ



ಬೀಜಿಂಗ್, ಒಂದು ಹಂತದಲ್ಲಿ ಬಾಡಿಗೆ ಸೇನೆ ವ್ಯಾಗ್ನರ್ ಗ್ರೂಪ್‌ನ ತಿರುಗಿಬಿದ್ದಿದ್ದ ಹಿನ್ನೆಲೆಯಲ್ಲಿ ನಾಗರಿಕ ಹಿಂಸಾಚಾರದ ಹೊಸ್ತಿಲಲ್ಲಿದ್ದ ರಷ್ಯಾ ಇದೀಗ ಭಾರೀ ಅಪಾಯದಿಂದ ಪಾರಾಗಿದೆ. ಇದೇ ನಡುವೆ ಇದೀಗ ಚೀನಾದ ವಿದೇಶಾಂಗ ಸಚಿವಾಲಯ ಈ ಬಗ್ಗೆ ಪ್ರತಿಕ್ರಿಯೆ ನೀಡಿದ್ದು, ರಾಷ್ಟ್ರೀಯ ಸ್ಥಿರತೆಯನ್ನು ಕಾಪಾಡುವ ನಿಟ್ಟಿನಲ್ಲಿ ರಷ್ಯಾಗೆ ಚೀನಾ ಎಲ್ಲಾ ರೀತಿಯ ಬೆಂಬಲ ನೀಡುತ್ತದೆ ಎಂದು ಘೋಷಿಸಿದೆ.

ರಷ್ಯಾದ ಉಪ ವಿದೇಶಾಂಗ ಸಚಿವ ಆಂಡ್ರೆ ರುಡೆಂಕೊ ಅವರು ನಿನ್ನೆ ಬೀಜಿಂಗ್‌ನಲ್ಲಿ ಅಂತಾರಾಷ್ಟ್ರೀಯ ವಿಚಾರಗಳ ಕುರಿತು ಮಾತುಕತೆ ನಡೆಸಿದರು.

ಜೂನ್ 24ರಂದು ವ್ಯಾಗ್ನರ್ ಗುಂಪು ನಡೆಸಿದ ಘಟನೆಗಳಿಗೆ ಸಂಬಂಧಿಸಿದಂತೆ ರಷ್ಯಾದಲ್ಲಿನ ಪರಿಸ್ಥಿತಿಯನ್ನು ಸ್ಥಿರಗೊಳಿಸುವ ನಿಟ್ಟಿನಲ್ಲಿ ದೇಶದ ಒಕ್ಕೂಟದ ನಾಯಕತ್ವದ ಪ್ರಯತ್ನಗಳಿಗೆ ಚೀನಾ ಬೆಂಬಲ ಸೂಚಿಸಿದೆ. ಅಲ್ಲದೆ ರಷ್ಯಾದ ಒಕ್ಕೂಟ ಮತ್ತು ಮತ್ತಷ್ಟು ಸಮೃದ್ಧಿಯನ್ನು ಬಲಪಡಿಸುವ ನಿಟ್ಟಿನಲ್ಲಿ ಆಸಕ್ತಿ ವ್ಯಕ್ತಪಡಿಸಿದೆ ಎಂದು ರಷ್ಯಾ ವಿದೇಶಾಂಗ ಸಚಿವಾಲಯ ತಿಳಿಸಿದೆ. ಸದ್ಯ ರುಡೆಂಕೊ ಅವರು ಚೀನಾಗೆ ಯಾವಾಗ ಭೇಟಿ ನೀಡಿದರು ಎಂಬುದು ಇದೀಗ ಕುತೂಹಲ ಮೂಡಿಸಿದೆ. ಮೂಲಗಳ ಪ್ರಕಾರ ವ್ಯಾಗ್ನರ್ ಗುಂಪು ರಷ್ಯಾ ವಿರುದ್ಧ ತಿರುಗಿಬಿದ್ದ ಕೂಡಲೇ ರುಡೆಂ-ಕೊ ಅವರು ಚೀನಾಗೆ ಪ್ರಯಾಣ ಬೆಳೆಸಿ, ಮಾತುಕತೆ ನಡೆಸಿದ್ದರು ಎನ್ನಲಾಗಿದೆ. ಸದ್ಯ ಬೆಲರೂಸ್ ನೇತೃತ್ವದಲ್ಲಿ ನಡೆದ ಸಂಧಾನ ಮಾತುಕತೆಯ ಫಲಪ್ರದವಾದ ಹಿನ್ನೆಲೆಯಲ್ಲಿ ಮಾಸ್ಕೋದತ್ತ ತೆರಳುತ್ತಿದ್ದ ವ್ಯಾಗ್ನರ್ ಗುಂಪು ಇದೀಗ ಹಿಂದಿರುಗಿದೆ.

# ಉತ್ತರ ಭಾರತದಲ್ಲಿ ವರುಣನ ಅಬ್ಬರಕ್ಕೆ 7 ಮಂದಿ ಬಲಿ

ನವದೆಹಲಿ -ಮುಂಗಾರು ಆರಂಭ ಎದುರು ನೋಡುತ್ತಿದ್ದ ಉತ್ತರ ಭಾರತದ ಮಂದಿಗೆ ಭಾರಿ ಮಳೆಯಿಂದ ಸಂಭವಿಸಿದ ಭೂಕುಸಿತ, ಪ್ರವಾಹ ಸೇರಿದಂತೆ ಇನ್ನಿತರೆ ಪ್ರಕೃತಿ ವಿಕೋಪಗಳಿಂದ ಕನಿಷ್ಠ 7 ಮಂದಿ ಸಾವನ್ನಪ್ಪಿದ್ದಾರೆ. ಘಟನೆ ಹಿಮಾಚಲ ಪ್ರದೇಶ, ಉತ್ತರ ಖಾಂಡ, ಉತ್ತರ ಪ್ರದೇಶ ರಾಜ್ಯದಲ್ಲಿ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದೆ.

ಧಾರಾಕಾರ ಮಳೆಗೆ ಉತ್ತರ ಭಾರತದ ಜನರು ತತ್ತರಿಸು ವಂತಾಗಿದೆ. ಹಿಮಾಚಲದಲ್ಲಿ ಹಠಾತ್ ಪ್ರವಾಹಕ್ಕೆ ಹತ್ತಕ್ಕೂ ಹೆಚ್ಚು ವಾಹನಗಳು ಕೊಚ್ಚಿ ಹೋಗಿದೆ ಮೂರು ವಾಹನಗಳು ಕಾಣೆಯಾಗಿವೆ.



ಮಳೆ ಸಂಬಂಧಿಸಿದ ಅನಾಹುತದಿಂದ 100ಕ್ಕೂ ಹೆಚ್ಚು ರಸ್ತೆಗಳನ್ನು ನಿರ್ಬಂಧಿಸಲಾಗಿದೆ. ವಿಮಾನ ಹಾರಾಟ ಬಂದ್ ಮಾಡಲಾಗಿದೆ. ನಿರಂತರ ಮಳೆಯಿಂದ ಉಂಟಾದ ಭೂಕುಸಿತದ ಭೀತಿಯಿಂದ ಚಾರ್ ಧಾಮ್ ದೇಗುಲಗಳಿಗೆ ಹೋಗುವ ಗಂಗೋತ್ರಿ ಮತ್ತು ಯಮುನೋತ್ರಿ ಹೆದ್ದಾರಿಗಳು ಸೇರಿದಂತೆ ಗರ್ವಾಲ್‌ನಲ್ಲಿ ಸಂಚಾರ ಸ್ಥಗಿತಗೊಳಿಸಲಾಗಿದೆ. ಕೇದಾರನಾಥ ಯಾತ್ರೆಯನ್ನೂ ಕೂಡ ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಡೆಹ್ರಾಡೂನ್‌ನ ಜಾಲಿ ಗ್ರಾಂಟ್ ವಿಮಾನ ನಿಲ್ದಾಣದಲ್ಲಿ ಭಾರೀ ಮಳೆ ಸುರಿದ ಕಾರಣ ಎರಡು ವಿಮಾನಗಳ ಮಾರ್ಗ ಬದಲಿಸಲಾಗಿದೆ. ಪವಿತ್ರ ಪಟ್ಟಣ ಹರಿದ್ವಾರದಲ್ಲಿ, ನೀರು ರಸ್ತೆಗಳ ಮೇಲೆ ಸುಳಿದಾಡಿತು, ಮನೆಗಳಿಗೆ ಪ್ರವೇಶಿಸಿತು ಮತ್ತು ಖಾಸಗಿ ಸಿಟಿ ಆಸ್ಪತ್ರೆಯ ನೆಲ ಮಹಡಿಗೆ ನೀರು ನುಗ್ಗಿ ಆಸ್ಪತ್ರೆ ಮುಚ್ಚಲಾಗಿದೆ.

ಮಳೆ ಸಂಬಂಧಿತ ಅನಾಹುತಗಳಲ್ಲಿ ಸತ್ತವರಲ್ಲಿ ಇಬ್ಬರು ಅಕಾರ್ ನಿವಾಸಿಗಳಾಗಿದ್ದು ಚಂಬಾದ ಖಡಾಮುಖ್‌ನಲ್ಲಿರುವ ಚಮೇರಾ ಅಣೆಕಟ್ಟಿಗೆ ವಾಹನ ಬಿದ್ದ ಪರಿಣಾಮ



ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಕಾರು ಚಾಲಕನ ನಿಯಂತ್ರಣ ತಪ್ಪಿ ರಸ್ತೆಯಿಂದ ಹೊರಕ್ಕೆ ಪಲ್ಟಿಯಾಗಿ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಭಾರೀ ಮಳೆ ಹಿನ್ನೆಲೆಯಲ್ಲಿ ಶಿಮ್ಲಾದ ದೂರದ ದೊಡ್ರಾ ಕ್ವಾರ್ ಪ್ರದೇಶದಲ್ಲಿ ಜಾರುವ ಬಂಡೆಯೊಂದು ಡಿಕ್ಕಿ ಹೊಡೆದು ಚಾರಣಿಗನೊಬ್ಬ ಮೃತಪಟ್ಟಿದ್ದಾನೆ. ಅವರನ್ನು ಬಿಹಾರ ಮೂಲದ ಜಿತೇಂದರ್ (54) ಎಂದು ಗುರುತಿಸಲಾಗಿದ್ದು, ಕಿನ್ನೌರ್‌ನ ಸಾಂಗ್ಲಾಗೆ ತೆರಳುತ್ತಿದ್ದ ಐವರು ಸದಸ್ಯರ ಟ್ರೆಕ್ಕಿಂಗ್ ಗುಂಪಿನ ಭಾಗವಾಗಿದ್ದರು ಎಂದು ತಿಳಿಸಿದ್ದಾರೆ

ಪಶ್ಚಿಮ ಉತ್ತರ ಪ್ರದೇಶದ ಮುಜಾಫರ್ ನಗರದಲ್ಲಿ, ಭಾರಿ ಮಳೆಯಿಂದ ಓವೈಸ್ ಅಹ್ಮದ್ (13) ಮತ್ತು ಆತನ ಸೋದರ ಸಂಬಂಧಿ ಅಸ್ಲಾನ್ ಆಲಂ (15) ಅಹ್ಮದ್ ಅವರ ಸಹೋದರಿ ಶ್ರೇಮಾ ಪರ್ವಿನ್, 12, ಸಹೋದರ ಸಮೀರ್, 17 ಮತ್ತು ಅವರ ತಂದೆ ಇದ್ರಿಸ್ ಅಹ್ಮದ್, ಮೃತಪಟ್ಟಿದ್ದಾರೆ.

ಬಿಯಾಸ್ ನದಿಯ ನೀರಿನ ಮಟ್ಟ ಹೆಚ್ಚಾದ ಕಾರಣ ಕುಲು ಜಿಲ್ಲಾಡಳಿತ ರಾಫ್ಟಿಂಗ್ ನಿಷೇಧಿಸಿದೆ. ದಿಢೀರ್ ಪ್ರವಾಹದಿಂದಾಗಿ ಹಿಮಾಚಲ ಪ್ರದೇಶದ ಹಲವು ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಿ ನೀರು ಪೂ-ರೈಕೆಗೆ ಅಡ್ಡಿಯಾಯಿತು. ಮುಂದಿನ 24 ಗಂಟೆಗಳಲ್ಲಿ ಹಿಮಾಚಲದಲ್ಲಿ ಹೆಚ್ಚಿನ ಪ್ರವಾಹ ಉಂಟಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.



## ಸಿಡಿಲಿಗೆ 400 ಮೇಕೆ ಬಲಿ

**ಬಾಗೇಶ್ವರದಲ್ಲಿ ಸಿಡಿಲು ಬಡಿದು ಸುಮಾರು 400 ಮೇಕೆಗಳು ಸಾವನ್ನಪ್ಪಿರುವ ಘಟನೆ ನಡೆದಿದೆ. ಇದರಿಂದಾಗಿ ಮೇಕೆಗಳ ಮಾಲೀಕರನ್ನು ಕಂಗಾಲಾಗುವಂತೆ ಮಾಡಿದೆ.**

**ಉತ್ತರ ಭಾರತದ ವಿವಿಧ ಭಾಗಗಳಲ್ಲಿ ಮಳೆಯಿಂದ ಭಾರಿ ಅನಾಹುತವಾಗಿದ್ದು ರಸ್ತೆ, ವಿಮಾನ, ರೈಲು ಸಂಚಾರಕ್ಕೆ ಬಾರಿ ಅಡ್ಡಿಯಾಗಿದೆ. ಉತ್ತರಾಖಂಡದಲ್ಲಿ ಮುಂದಿನ ನಾಲ್ಕೈದು ದಿನಗಳ ಕಾಲ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.**

ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಕಂಡಿಯಾಲ್ ಗ್ರಾಮದ ಬಳಿ ಸಿಡಿಲು ಬಡಿದು 20 ರ ಪ್ರಾಯದ ವ್ಯಕ್ತಿಯೊಬ್ಬರು ಸಾವನ್ನಪ್ಪಿದ್ದಾರೆ ಮತ್ತು ಮೂವರು ಗಾಯಗೊಂಡಿದ್ದಾರೆ. ಕೇದಾರನಾಥ ಬಳಿ ಗೌರಿಕುಂಡ್ ಮತ್ತು ಸೋನ್‌ಪ್ರಯಾಗ ನಡುವೆ ಸಂಚರಿಸುತ್ತಿದ್ದ ಶಟಲ್ ಟ್ಯಾಕ್ಸಿಯೊಂದರ ಚಾಲಕನ ವಾಹನಕ್ಕೆ ಭಾರೀ ಬಂಡೆಯೊಂದು ಡಿಕ್ಕಿ ಹೊಡೆದು ನುಜ್ಜುಗುಜ್ಜಾದ ಪರಿಣಾಮ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಲೈಂಗಿಕ ಕಿರುಕುಳ ಕುಸ್ತಿಪಟುಗಳ ಕಾನೂನು ಹೋರಾಟ



ನವದೆಹಲಿ, -ಭಾರತೀಯ ಕುಸ್ತಿ ಒಕ್ಕೂಟದ ಅಧ್ಯಕ್ಷ ಬ್ರಿಜ್ ಭೂಷಣ್ ಸಿಂಗ್ ವಿರುದ್ಧ ಲೈಂಗಿಕ ಕಿರುಕುಳದ ಆರೋಪ ಮಾಡಿ ಕಳೆದ 38 ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದ ಮಹಿಳಾ ಕುಸ್ತಿಪಟುಗಳು ತಮ್ಮ ಪ್ರತಿಭಟನಾ ಹೋರಾಟ ಅಂತ್ಯಗೊಳಿಸಿದ್ದು ನ್ಯಾಯಾಲಯದಲ್ಲಿ ಹೋರಾಟ ಮುಂದುವರಿಸುವುದಾಗಿ ಪ್ರಕಟಿಸಿದ್ದಾರೆ.

ಮೇ.28 ರಿಂದ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸಿ ಲೈಂಗಿಕಕಿರುಕುಳ ನೀಡಿದ ಬ್ರಿಜ್ ಭೂಷಣ್ ಸಿಂಗ್ ಅವರನ್ನು ಬಂಧಿಸುವಂತೆ ಒತ್ತಾಯ ಮಾಡಿದ್ದರು. ಮಹಿಳಾ ಕುಸ್ತಿಪಟುಗಳಿಗೆ ರೈತ ಸಂಘಟನೆಗಳೂ ಸೇರಿದಂತೆ ಹಲವು ಬೆಂಬಲ ನೀಡಿದ್ದರು.

ಮಹಿಳಾ ಮಹಿಳಾ ಕುಸ್ತಿಪಟುಗಳಾದ ವಿನೇಶ್ ಪೋಗಟ್, ಸಾಕ್ಷಿ ಮಲಿಕ್ ಮತ್ತು ಬಜರಂಗ್ ಪುನಿಯಾ ಟ್ವೀಟ್ ಮಾಡಿ ಭಾರತೀಯ ಕುಸ್ತಿ ಒಕ್ಕೂಟದ ಅಧ್ಯಕ್ಷ ಬ್ರಿಜ್ ಭೂಷಣ್ ಸಿಂಗ್ ವಿರುದ್ಧ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸುವುದಾಗಿ ಹೇಳಿದ್ದ ಸರ್ಕಾರ ನಮ್ಮ ಬೇಡಿಕೆಯನ್ನು ಈಡೇರಿಸಿದೆ. ಹೀಗಾಗಿ ನಾವು ಜಂತರ್ ಮಂತರ್‌ನಿಂದ ಹೋರಾಟ ಕೈಬಿಟ್ಟು ನ್ಯಾಯಾಲಯದಲ್ಲಿ ಹೋರಾಟ ಮಾಡುತ್ತೇವೆ ಎಂದು ಪ್ರಕಟಿಸಿದ್ದಾರೆ.

ಲೈಂಗಿಕ ಆರೋಪ ಪ್ರಕರಣದಲ್ಲಿ, ನಮಗೆ ನ್ಯಾಯ ಸಿಗುವವರೆಗೂ ಹೋರಾಟ ಮುಂದುವರಿಯಲಿದೆ. ಇನ್ನು ನಮ್ಮ ಹೋರಾಟ ಏನಿದ್ದರೂ ನ್ಯಾಯಾಲಯದಲ್ಲಿ ಎಂದು ತಿಳಿಸಿದ್ದಾರೆ.

ಭಾರತೀಯ ಕುಸ್ತಿ ಒಕ್ಕೂಟದ ಅಧ್ಯಕ್ಷರ ಚುನಾವಣಾ ಪ್ರಕ್ರಿಯೆ ಪ್ರಾರಂಭವಾಗಿದೆ. ಜುಲೈ 11ರ ಚುನಾವಣೆಗೆ ಸಂಬಂಧಿಸಿದಂತೆ ಸರ್ಕಾರ ನೀಡಿದ ಭರವಸೆಗಳ ಈಡೇರಿಕೆಗಾಗಿ ಕಾಯುತ್ತೇವೆ." ಸದ್ಯಕ್ಕೆ ಕೆಲವು ದಿನಗಳ ಕಾಲ ಸಾಮಾಜಿಕ ಮಾಧ್ಯಮದಿಂದ ವಿರಾಮ ತೆಗೆದುಕೊಳ್ಳುತ್ತಿದ್ದಾರೆ ಎಂದು ಟ್ವೀಟ್ ಮಾಡಿದ್ದಾರೆ.

ಬ್ರಿಜ್ ಭೂಷಣ್ ಸಿಂಗ್ ವಿರುದ್ಧ ಲೈಂಗಿಕ ಕಿರುಕುಳ ಮತ್ತು ಕ್ರಿಮಿನಲ್ ಬೆದರಿಕೆಯ ಆರೋಪಗಳನ್ನು ಪೊಲೀಸರು ದಾಖಲಿಸಿದ ನಂತರ, ಹಲವಾರು ಮಹಿಳಾ ಕುಸ್ತಿಪಟುಗಳಿಂದ ದೂರುಗಳು ಮತ್ತು ವಿಳಂಬದ ಬಗ್ಗೆ ಹೆಚ್ಚುತ್ತಿರುವ ಆಕ್ರೋಶದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

# ಅಮೆರಿಕಾ, ಈಜಿಪ್ಟ್ ಪ್ರವಾಸದಿಂದ ಮೋದಿ ವಾಪಸ್



ನವದೆಹಲಿ, -ಅಮೇರಿಕಾ, ಈಜಿಪ್ಟ್ ಯಶಸ್ವಿ ಪ್ರವಾಸ ಮುಗಿಸಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮುಂಜಾನೆ ಸ್ವದೇಶಕ್ಕೆ ವಾಪಾಸ್ಸಾಗಿದ್ದಾರೆ.

ದೆಹಲಿ ವಿಮಾನ ನಿಲ್ದಾಣದಲ್ಲಿ ಬಿಜೆಪಿ ಅಧ್ಯಕ್ಷ ಜೆ.ಪಿ ನಡ್ಡಾ ಮತ್ತು ವಿದೇಶಾಂಗ ವ್ಯವಹಾರಗಳ ಖಾಲೆ ರಾಜ್ಯ ಸಚಿವೆ ಮೀನಾಕ್ಷಿ ಲೇಖಿ ಸೇರಿದಂತೆ ಮತ್ತಿತರರು ಪ್ರಧಾನಿ ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡರು.

ಈ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ತಾವು ವಿದೇಶ ಪ್ರವಾಸದಲ್ಲಿದ್ದ ಸಮಯದಲ್ಲಿ ದೇಶದಲ್ಲಿ ನಡೆದ ಬೆಳವಣಿಗೆಗಳ ಬಗ್ಗೆ ನಡ್ಡಾ ಅವರಿಂದ ಮಾಹಿತಿ ಪಡೆದರು.

ಪ್ರಧಾನಿ ಅವರ ಪ್ರತಿಕ್ರಿಯೆಗೆ ಪಕ್ಷದ ಅಧ್ಯಕ್ಷ ನಡ್ಡಾ ಅವರು " ತಮ್ಮ ಒಂಬತ್ತು ವರ್ಷಗಳ ಸರ್ಕಾರದ ವರದಿ ಕಾರ್ಡ್‌ನೊಂದಿಗೆ ಪಕ್ಷದ ನಾಯಕರು ದೇಶದ ಜನರಿಗೆ ಜನರನ್ನು ತಲುಪುತ್ತಿದ್ದಾರೆ ಎಂದು ಹೇಳಿದ್ದಾರೆ ಎಂದು ಬಿಜೆಪಿ ಸಂಸದ ಮನೋಜ್ ತಿವಾರಿ ತಿಳಿಸಿದ್ದಾರೆ.

ಮತ್ತೊಬ್ಬ ಸಂಸದ ಪರ್ವೇಶ್ ವರ್ಮಾ ಮಾತನಾಡಿ ದೇಶದಲ್ಲಿ ಏನಾಗುತ್ತಿದೆ ಮತ್ತು ಪಕ್ಷದ ಸಾರ್ವಜನಿಕ ಸಂಪರ್ಕ ಕಾರ್ಯಕ್ರಮ ಹೇಗೆ ನಡೆಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ, ಪಕ್ಷದ ಅಧ್ಯಕ್ಷರನ್ನು ಕೇಳಿದಾಗ ಅದಕ್ಕೆ ಅವರು ವಿವಿರ ನೀಡಿದ್ದಾರೆ ಎಂದರು.

ಜೂನ್ 20 ರಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಐದು ದಿನಗಳ ಭೇಟಿ ಪ್ರಾರಂಭಿಸಿ ಜೂನ್ 21 ರಿಂದ ಜೂನ್ 24 ರವರೆಗೆ ಅಮೇರಿಕಾ ಮತ್ತು ನಂತರ ಎರಡು ದಿನಗಳ ಕಾಲ ಈಜಿಪ್ಟ್ ಪ್ರವಾಸದಲ್ಲಿದ್ದರು. ಇಂದು ಮುಂಜಾನೆ ಎರಡು ದೇಶಗಳ ಪ್ರವಾಸ ಮುಗಿಸಿ ದೆಹಲಿದೆ ವಾಪಸಾದರು.

ಅಮೇರಿಕಾ ಮತ್ತು ಈಜಿಪ್ಟ್ ಯಶಸ್ವಿ ಪ್ರವಾಸದ ಅವಧಿಯಲ್ಲಿ ಹಲವು ಮಹತ್ವದ ಒಪ್ಪಂದಗಳಿಗೆ ಸಹಿ ಹಾಕಿದ್ದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಬರ ಮಾಡಿಕೊಳ್ಳಲು ದೆಹಲಿ ಬಿಜೆಪಿ ನಾಯಕರು ಮತ್ತು ಪಕ್ಷದ ಸಂಸದರಾದ ಹರ್ಷವರ್ಧನ್, ಹನ್ಸ್ ರಾಜ್ ಹನ್ಸ್ ಮತ್ತು ಗೌತಮ್ ಗಂಭೀರ್ ಕೂಡ ದೆಹಲಿ ವಿಮಾನ ನಿಲ್ದಾಣದಲ್ಲಿ ಹಾಜರಿದ್ದರು.

## ಪಾಕ್ ವಾಯು ಪ್ರದೇಶಕ್ಕೆ ಇಂಡಿಗೋ ಪ್ರವೇಶ




ಶ್ರೀನಗರ, -ಹವಾಮಾನ ವೈಪರೀತ್ಯದಿಂದಾಗಿ ಶ್ರೀನಗರ-ಜಮ್ಮು ಇಂಡಿಗೋ ವಿಮಾನವು ಭಾನುವಾರ ಪಾಕಿಸ್ತಾನದ ವಾಯುಪ್ರದೇಶವನ್ನು ಪ್ರವೇಶಿಸಿದೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

ಇಂಡಿಗೋ 6ಜ-2124 ವಿಮಾನವು ಕೆಟ್ಟ ಪ್ರತಿಕೂಲ ಹವಾಮಾನದ ಕಾರಣ ಸ್ವಲ್ಪ ಸಮಯದವರೆಗೆ ಪಾಕಿಸ್ತಾನದ ವಾಯುಪ್ರದೇಶವನ್ನು ಪ್ರವೇಶಿಸಿತು. ನಂತರ ವಿಮಾನವನ್ನು ಅಮೃತಸರಕ್ಕೆ ತಿರುಗಿಸಲಾಯಿತು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇಂಡಿಗೋ ವಿಮಾನವು ಪಾಕಿಸ್ತಾನದ ವಾಯುಪ್ರದೇಶವನ್ನು ಪ್ರವೇಶಿಸುವ ಮೊದಲು ಎರಡೂ ದೇಶಗಳ ಅಧಿಕಾರಿಗಳಿಗೆ ಮಾಹಿತಿ ನೀಡಲಾಯಿತು. ವಿಮಾನದ ಮಾರ್ಗವನ್ನು ಜಮ್ಮು ಮತ್ತು ಲಾಹೋರ್ ಎಟಿಸಿಗಳು ಉತ್ತಮವಾಗಿ ನಿರ್ವಹಿಸಿದ್ದರಿಂದ ವಿಮಾನವು ಅಮೃತಸರದಲ್ಲಿ ಸುರಕ್ಷಿತವಾಗಿ ಇಳಿಯಿತು ಎಂದು ವಿಮಾನಯಾನ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ವಿಮಾನವು ಜಮ್ಮು ವಿಮಾನ ನಿಲ್ದಾಣದಲ್ಲಿ ಇಳಿಯಬೇಕಿತ್ತು. ಆದರೆ ಪ್ರತಿಕೂಲ ಹವಾಮಾನದಿಂದಾಗಿ ವಿಮಾನವನ್ನು ಅಮೃತಸರಕ್ಕೆ ತಿರುಗಿಸಲಾಯಿತು.

# ಮಕ್ಕಳ ಸಾವು ತನಿಖೆ ಚುರುಕು



ಜಕಾರ್ತಾ, ಇತ್ತೀಚೆಗೆ ಇಂಡೋನೇಶ್ಯಾದಲ್ಲಿ ಕಲುಷಿತ ಕೆಮ್ಮಿನ ಸಿರಪ್ ಸೇವಿಸಿ 200ಕ್ಕೂ ಹೆಚ್ಚಿನ ಮಕ್ಕಳು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಇಲಾಖೆ ತನಿಖೆ ಮತ್ತಷ್ಟು ಚುರುಕುಗೊಳಿಸಿದೆ. ದೇಶದಲ್ಲಿನ ಔಷಧ ನಿಯಂತ್ರಕ ಅಧಿಕಾರಿಗಳು ಯಾವುದೇ ಕ್ರಿಮಿನಲ್ ಕೆಲಸದಲ್ಲಿ ಪಾಲ್ಗೊಂಡಿರುವ ಶಂಕೆಯ ಹಿನ್ನೆಲೆಯಲ್ಲಿ ತನಿಖೆ ಮುಂದುವರೆದಿದೆ.

ಕಳೆದ ವರ್ಷ ಗಾಂಬಿಯಾ ಹಾಗೂ ಉಜ್ಬೇಕಿಸ್ತಾನದಲ್ಲಿ ಕೆಮ್ಮಿನ ಸಿರಪ್ ಸೇವನೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಮೃತಪಟ್ಟಿದ್ದರು. ಬಳಿಕ ಇದೇ ರೀತಿಯ ಘಟನೆ ಇಂಡೋನೇಶ್ಯಾದಲ್ಲೂ ನಡೆದಿತ್ತು. ಈ ಹಿನ್ನೆಲೆಯಲ್ಲಿ ಇಂಡೋನೇಶ್ಯಾದ ಆಹಾರ ಹಾಗೂ ಔಷಧಗಳ ಏಜೆನ್ಸಿಯು (ಬಿಪಿಓಎಮ್) ಸಂಬಂಧಿತ ಔಷಧ ಕಂಪೆನಿಗಳ ವಿರುದ್ಧ ತನಿಖೆ ಮತ್ತಷ್ಟು ಚುರುಕುಗೊಳಿಸಿದೆ. ಕಳೆದ ವರ್ಷ ಕಲುಷಿತ ಸಿರಪ್ ಕಂಪೆನಿಗಳಿಗೆ ಕಚ್ಚಾ ವಸ್ತುಗಳನ್ನು ಪೂರೈಸಿದ್ದ ದೇಶದ ವಿವಿಧ ಕಂಪೆನಿಗಳಿಗೆ ಸೇರಿದ ಎಂಟು ವ್ಯಕ್ತಿಗಳನ್ನು ಪೊಲೀಸರು ಬಂಧಿಸಿದ್ದರು. ಈ ವೇಳೆ ಕೆಮ್ಮಿನ ಸಿರಪ್‌ಗಳಲ್ಲಿ ಕಾನೂನುಬದ್ಧ ಅಂಶದ ಬದಲಿಗೆ ವಿಷಕಾರಿ ಕೈಗಾರಿಕಾ ದರ್ಜೆಯ ರಾಸಾಯನಿಕಗಳು ಒಳಗೊಂಡಿರುವುದು ಬಯಲಾಗಿತ್ತು. ಇನ್ನು ಪ್ರಕರಣದ ಬಗ್ಗೆ ಪ್ರತಿಕ್ರಿಯೆ ನೀಡಿರುವ ಪ್ರಕರಣದ ತನಿಖೆ ನಡೆಸುತ್ತಿರುವ ಹಿರಿಯ ಪೊಲೀಸ್ ಅಧಿಕಾರಿ ಅಂದಿಕಾ ಉರಾಸ್ದೀನ್, ತನಿಖೆಗೆ ಸಂಬಂಧಿಸಿದಂತೆ ಬಿಪಿಓಎಮ್‌ನ ಹಲವು ಅಧಿಕಾರಿಗಳನ್ನು ವಿಚಾರಣೆಗೆ ಕರೆಯಲಾಗಿದೆ. ಸದ್ಯ ತನಿಖೆ ಇನ್ನೂ ಮುಂದುವರೆದಿದೆ ಎಂದು ತಿಳಿಸಿದ್ದಾರೆ.

# ಕಿಂಗ್ ಕುರಿ ಬೆಲೆ ಬರೋಬ್ಬರಿ 12 ಲಕ್ಷ




ಭೋಪಾಲ್ -ಬಕ್ರೀದ್ ಹಬ್ಬಕ್ಕೆ ಇನ್ನು ಕೆಲ ದಿನ ಬಾಕಿಯಿರುವಾಗಲೇ ದೇಶಾದ್ಯಂತ ಟಗರು, ಕುರಿ, ಮೇಕೆಗಳ ವ್ಯಾಪಾರ ಜೋರಾಗಿದೆ. ಅಂತೆಯೇ ಮಧ್ಯಪ್ರದೇಶದ ಇಂದೋರ್‌ನಲ್ಲಿ, ಪವಿತ್ರ ಹಬ್ಬವಾದ

ಬಕ್ರೀದ್ ಗಾಗಿ ಮಾರಾಟಕ್ಕಾಗಿ ತಂದ ಕಿಂಗ್ ಎಂಬ ಹೆಸರಿನ ಮೇಕೆಯು ಎಲ್ಲರ ಗಮನವನ್ನು ತನ್ನತ್ತ ಸೆಳೆಯುತ್ತಿದೆ. ಮೇಕೆಯ ಮಾಲೀಕ ಸುಹೇಲ್ ಅಹಮದ್ ಮೇಕೆಗೆ ಕಿಂಗ್ ಹೆಸರಿಟ್ಟಿದ್ದಾರೆ. ಈ ಮೇಕೆ ಬರೋಬ್ಬರಿ 176 ಕೆಜಿ ತೂಕವಿದ್ದು, ಇದರ ಬೆಲೆ 12 ಲಕ್ಷ ರೂಪಾಯಿ ಎಂದು ನಿಗದಿಪಡಿಸಲಾಗಿದೆ.

ಬಕ್ರೀದ್ ನಿಮಿತ್ತ ಮೇಕೆಗಳ ಮಾರಾಟ ಹೆಚ್ಚಾಗಿದೆ. ಈ ಸಂದರ್ಭದಲ್ಲಿ ಮೇಕೆಗಳಿಗೆ ಹೆಚ್ಚಿನ ಬೇಡಿಕೆಯಿದ್ದು, ಪರಿಣಾಮ ಮಾರಾಟ, ಖರೀದಿ ಜೋರಾಗಿರುತ್ತದೆ. ಹೀಗಾಗಿ ಈ ಮಾರುಕಟ್ಟೆಗೆ ಕೋಟಾ ತಳಿಯ ಮೇಕೆಗಳನ್ನು ತರುವುದಾಗಿ ಕಿಂಗ್ ಮೇಕೆ ಮಾಲೀಕ ಅಹಮದ್ ತಿಳಿಸಿದ್ದಾರೆ.

ಕಿಂಗ್‌ಗೆ ತಂಪಿನ ಆಸರೆ: ಬಿಸಿಲಿನಿಂದ ಮೇಕೆಯನ್ನು ರಕ್ಷಿಸಲು ಏರ್ ಕೂಲರ್ ವ್ಯವಸ್ಥೆ ಮಾಡಲಾಗಿದೆ. ಅಷ್ಟೇ ಅಲ್ಲ, ಮೇಕೆಗಳ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಲಾಗಿದೆ. ಕಾಲಕಾಲಕ್ಕೆ, ಪಶುವೈದ್ಯರಿಂದ ಅದರ ಆರೋಗ್ಯವನ್ನು ಪರೀಕ್ಷಿಸುವ ವ್ಯವಸ್ಥೆಯನ್ನೂ ಮಾಡಲಾಗುತ್ತದೆ. ಬೇಸಿಗೆಯಲ್ಲಿ ಮೇಕೆ ಶೆಡ್‌ನೊಳಗೆ ಎರಡು ಕೂಲರ್‌ಗಳನ್ನು ಅಳವಡಿಸಲಾಗುತ್ತದೆ.

ನಾನು ಎಂಟು ತಿಂಗಳ ಹಿಂದೆ ರಾಜಸ್ಥಾನದಿಂದ ಈದ್ ಅಲ್-ಅಧಾ ಹಬ್ಬಕ್ಕಾಗಿ ಈ ಮೇಕೆಯನ್ನು ಖರೀದಿಸಿದೆ. 'ಕಿಂಗ್'ಗೆ ಪ್ರತಿ ನಾಲ್ಕು ಗಂಟೆಗಳಿಗೊಮ್ಮೆ ಬೇಳೆ, ಗೋಧಿ, ಹಾಲು, ಖರ್ಜೂರ ಮತ್ತು ಜೇನುತುಪ್ಪವನ್ನು ನೀಡಲಾಗುತ್ತದೆ. ಈ ಮೇಕೆ 43 ಇಂಚು ಎತ್ತರವಿದೆ ಎಂದು ಅಹಮದ್ ಮಾಹಿತಿ ನೀಡಿದರು. ಅಹ್ಮದ್ ಈ ಮೇಕೆಯನ್ನು ಮುಂಬೈ ನಿವಾಸಿ ಅನ್ಸರ್ ಖಾನ್ ಅಹ್ಮದ್ ಎಂಬುವವರಿಗೆ ಮಾರಾಟ ಮಾಡಿದ್ದು, 12 ಲಕ್ಷ ರೂ ಗೆ ವ್ಯಾಪಾರ ಕುದುರಿಸಿದ್ದಾರೆ ಎನ್ನಲಾಗಿದೆ.

## ಸಂಸದ ದುಬೆ ನಿಧನ



ನವದೆಹಲಿ -ಬಿಜೆಪಿ ರಾಜ್ಯಸಭಾ ಸಂಸದ ಹರ್ದ್ವಾರ್ ದುಬೆ ಅವರು ಇಂದು ಬೆಳಿಗ್ಗೆ ಆಸ್ಪತ್ರೆಯಲ್ಲಿ ನಿಧನರಾದರು ಎಂದು ಅವರ ಪುತ್ರ ಪ್ರಾಂಶು ದುಬೆ ತಿಳಿಸಿದ್ದಾರೆ.

74 ನೇ ವಯಸ್ಸಿನ ದುಬೆ ಅವರು ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಕಾರಣ ಹೆಚ್ಚಿನ ಚಿಕಿತ್ಸೆಗಾಗಿ ದೆಹಲಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.

# ಕಿದ್ವಾಯಿ ಆಸ್ಪತ್ರೆಗೆ ಸುವರ್ಣ ಸಂಭ್ರಮ




ಬೆಂಗಳೂರು, -ರಾಜ್ಯದ ಪ್ರತಿಷ್ಠಿತ ಕ್ಯಾನ್ಸರ್ ಆಸ್ಪತ್ರೆಯಾಗಿರುವ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ಸುವರ್ಣ ಸಂಭ್ರಮಾಚರಣೆ ಮಾಡಿಕೊಳ್ಳುತ್ತಿದೆ. ಇಂದು 50ನೇ ವರ್ಷಕ್ಕೆ ಪಾದರ್ಪಣೆ ಮಾಡುತ್ತಿರುವ ಈ ಸಂಸ್ಥೆಯು ಬಡ ಕ್ಯಾನ್ಸರ್ ರೋಗಿಗಳ ಪಾಲಿಗೆ ಸಂಜೀವಿನಿಯಾಗಿ ಕಾರ್ಯ ನಿರ್ವಹಿಸುತ್ತಿದೆ.

ಕೇವಲ 50 ಹಾಸಿಗೆ ಸೌಲಭ್ಯದೊಂದಿಗೆ ಆರಂಭವಾದ ಈ ಸಂಸ್ಥೆ ಇಂದು ಹೆಮ್ಮರವಾಗಿ ಬೆಳೆದಿದೆ. 1973ರಲ್ಲಿ ಮಾಜಿ ರಾಷ್ಟ್ರಪತಿ ವಿ.ವಿ.ಗಿರಿರವರು ಸಂಸ್ಥೆಯನ್ನು ಉದ್ಘಾಟಿಸಿದರು. ಬಳಿಕ 1980ರಲ್ಲಿ ಭಾರತ ಸರ್ಕಾರ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರದ ಸ್ಥಾನ ನೀಡಿತು. ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ ಈ ಸಂಸ್ಥೆಗೆ ರಿಸರ್ಚ್ ಅಸೋಸಿಯೇಷನ್ ಮಾನ್ಯತೆ ಕೊಟ್ಟಿದೆ.

ಕಿದ್ವಾಯಿ ಆಸ್ಪತ್ರೆಗ ಕೇವಲ ಕರ್ನಾಟಕದವರು ಮಾತ್ರವಲ್ಲದೇ ಹೊರ ರಾಜ್ಯಗಳಿಂದೂ ನೂರಾರು ರೋಗಿಗಳು ಆಗಮಿಸಿ ಚಿಕಿತ್ಸೆ ಪಡೆ-ಯುತ್ತಿದ್ದಾರೆ. ಸ್ವಾತಂತ್ರ್ಯ ಹೋರಾಟಗಾರ ಹಾಗೂ ಆಗಿನ ಗವರ್ನರ್ ಆಗಿದ್ದ ರಫಿ ಅಹ್ಮದ್ ಕಿದ್ವಾಯಿ ಅವರು ಆಸ್ಪತ್ರೆ ನಿರ್ಮಾಣಕ್ಕಾಗಿ 20 ಎಕರೆ ಭೂಮಿ ಹಾಗೂ ರೇಡಿಯೋಥೆರಪಿ ಯಂತ್ರ ಖರೀದಿಗಾಗಿ 1 ಲಕ್ಷ ರೂ ಧನ ಸಹಾಯ ಮಾಡಿದ್ದರು. ಇಂದಿನ ಕಿದ್ವಾಯಿ ಸಂಸ್ಥೆ ಈ ಮಟ್ಟಿಗೆ ಬೆಳೆಯಲು ಅಂದು ರಫಿ ಅಹ್ಮದ್ ನೀಡಿದ ಸಹಕಾರವೇ ಕಾರಣ ಎಂದರೇ ತಪ್ಪಗಲಾರದು.

ಪ್ರಸ್ತುತ ಕಿದ್ವಾಯಿ ಸಂಸ್ಥೆ 746 ಹಾಸಿಗೆಗಳನ್ನು ಒಳಗೊಂಡಿದೆ. ದೇಶದ ಪ್ರಮುಖ ಆಸ್ಪತ್ರೆಗಳ ಪೈಕಿ ಕಿದ್ವಾಯಿ ಕೂಡ ಒಂದಾಗಿದ್ದು, 21 ಸಾವಿರಕ್ಕೂ ಹೊಸ ಪ್ರಕರಣಗಳಿಗೆ ಚಿಕಿತ್ಸೆ ನೀಡುವ ಕಾರ್ಯ ಮಾಡುತ್ತಿದೆ. ಕಿದ್ವಾಯಿ ಸಂಸ್ಥೆಯು ಇತ್ತೀಚೆಗೆ ಅತ್ಯಾಧುನಿಕ ಉಪಕರಣಗಳನ್ನು ಒಳಗೊಂಡಿದ್ದು, 7 ಲೀನಿಯರ್ ವೇಗವರ್ಧಕಗಳು, 3 ಬ್ರಾಕಿಥೆರಪಿ ಘಟಕಗಳು, 4 ಸಿಟಿ ಸ್ಕ್ಯಾನ್ ಮತ್ತು 1 ಎಂಆರ್‌ಐ ಉಪಕರಣಗಳನ್ನು ಹೊಂದಿದೆ. ಇತೀಚಿಗಷ್ಟೇ ಬೋನ್ ಮ್ಯಾರೋ ಟ್ರಾನ್ಸ್‌ಪ್ಲಾಂಟ್ ಘಟಕವನ್ನು ತೆರೆದಿದೆ.

ಬೆಂಗಳೂರಿನಲ್ಲಿ ಮಾತ್ರವಲ್ಲದೇ ಕಿದ್ವಾಯಿ ಆಸ್ಪತ್ರೆ ಕಲಬುರಗಿಯಲ್ಲಿ ತೆರಯಲಾಗಿದ್ದು, ಉಳಿದಂತೆ ಮೈಸೂರು, ಬೆಳಗಾವಿ, ಶಿವಮೊಗ್ಗ ಜಿಲ್ಲೆಗಳಲ್ಲಿ ಕಿದ್ವಾಯಿ ಘಟಕ ತೆರೆಯಲು ಸರ್ಕಾರದಿಂದ ಮಂಜೂರು ಮಾಡಲಾಗಿದೆ.

# ಹೈಡ್ರಾಲಿಕ್ ಕ್ರೇನ್ ಪಲ್ಟಿ; ಚಾಲಕ ದುರ್ಮರಣ

ಬೆಳಗಾವಿ, -ಹೈಡ್ರಾಲಿಕ್‌ಕ್ರೈನ್ ಪಲ್ಟಿಯಾಗಿ ಚಾಲಕ ಮೃತಪಟ್ಟಿರುವ ದಾರುಣ ಘಟನೆ ಚಿಕ್ಕೋಡಿ ಪಟ್ಟಣದ ಹೊರವಲಯದ ಘಟ್ಟಿ ಬಸವಣ್ಣ ದೇವಸ್ಥಾನದ ಬಳಿ ನಡೆದಿದೆ.

ಚಿಕ್ಕೋಡಿ- ಹುಕ್ಕೇರಿ ರಾಜ್ಯ ಹೆದ್ದಾರಿಯಲ್ಲಿ ನಡೆದ ಈ ದುರ್ಘಟನೆಯಲ್ಲಿ ಚಿಕ್ಕೋಡಿ ತಾಲೂಕಿನ ಜೋಡಕುರಳಿ ನಿವಾಸಿ ಸತ್ಯಪ್ಪಾ ಖಿದ್ದಿ (27) ಮೃತಪಟ್ಟ ಯುವಕ.

ಸತ್ಯಪ್ಪಾ ಖಿದ್ದಿ ಕರೋಶ್ ಗ್ರಾಮದ ಕ್ರೇನನ್ನು ಚಲಾಯಿಸಿಕೊಂಡು ಹೋಗುತ್ತಿದ್ದಾಗ ಅದು ನಿಯಂತ್ರಣ ತಪ್ಪಿ ಪಲ್ಟಿಯಾಗಿ ಸತ್ಯಪ್ಪಾ ಖಿದ್ದಿ ಮೃತಪಟ್ಟಿದ್ದಾರೆ.

ಚಿಕ್ಕೋಡಿ ತಾಲೂಕಿನ ಕರೋಶಿ ಗ್ರಾಮದ ವಿಜಯ್ ನಿಕಮ್ ಮತ್ತು ವಿಕಾಸ್ ಪವಾರ್ ಅವರಿಗೆ ಗಾಯಗಳಾಗಿವೆ. ಗಾಯಾಳುಗಳಿಗೆ ಚಿಕ್ಕೋಡಿ ತಾಲೂಕಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಸ್ಥಳಕ್ಕೆ ಚಿಕ್ಕೋಡಿ ಸಂಚಾರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿದ್ದಾರೆ.

**ತೆಪ್ಪ ಮಗುಚಿ ಮೃತ್ಯು:**

ಕೆರೆಯಲ್ಲಿ ಮೀನು ಹಿಡಿಯಲು ಹೋದಾಗ ತೆಪ್ಪ ಮಗುಚಿ ಯುವಕನೊಬ್ಬ ಪ್ರಾಣ ಕಳೆದುಕೊಂಡ ಘಟನೆ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನ ತಾರನಾಳ ಕೆರೆಯಲ್ಲಿ ನಿನ್ನೆ ಸಂಜೆ ನಡೆದಿದೆ.

ಮಂಜುನಾಥ ಶಿವಪ್ಪ ಚಲವಾದಿ (17) ಮತ್ತು ಇನ್ನೊಬ್ಬ ಯುವಕ ಮನೆಯವರಿಗೆ ತಿಳಿಸದೆ ಕೆರೆಯಲ್ಲಿ ತೆಪ್ಪ ಬಳಸಿ ಅವರು ಮೀನು ಹಿಡಿಯುತ್ತಿದ್ದಾಗ ಅವರು ಸಾಗುತ್ತಿದ್ದ ತೆಪ್ಪ ಪಲ್ಟಿಯಾಗಿದೆ.

ತೆಪ್ಪ ಮಗುಚಿ ಯುವಕರು ಮುಳುಗುತ್ತಿರುವುದು ಗಮನಿಸಿದ ದಾರಿಹೋಕರೊಬ್ಬರು ಕೂಡಲೇ ನೀರಿಗೆ ಧುಮುಕಿ ಒಬ್ಬನನ್ನು ರಕ್ಷಣೆ ಮಾಡಿದ್ದಾರೆ. ಆದರೆ, ಅಷ್ಟರಲ್ಲಿ ಇನ್ನೊಬ್ಬ ಮುಳುಗಿದ್ದ.

ಇತ್ತ ರಕ್ಷಿಸಲ್ಪಟ್ಟ ಯುವಕ ಜನರು ತನ್ನನ್ನೇ ತಪ್ಪಿತಸ್ಥ ಎಂದು ಗುರುತಿಸಿ ಹಲ್ಲೆ ಮಾಡಬಹುದು ಎಂಬ ಭಯದಿಂದ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು ನಾಪತ್ತೆಯಾಗಿದ್ದ.

**ಮುಂಜಾನೆ ಶವ ಮೇಲಕ್ಕೆ:**

ವಿಷಯ ತಿಳಿದ ಮಂಜುನಾಥ ಶಿವಪ್ಪ ಚಲವಾದಿ ಮನೆಯವರು ಸ್ಥಳಕ್ಕೆ ಆಗಮಿಸಿದ್ದು, ಮಾಹಿತಿ ತಿಳಿದು ಸಂಜೆಯೇ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಅಗ್ನಿಶಾಮಕ ದಳದ ಸಿಬ್ಬಂದಿ ಸಹ ಸ್ಥಳಕ್ಕಾಗಮಿಸಿ ಮೃತದೇಹಕ್ಕಾಗಿ ಹುಡುಕಾಟ ನಡೆಸಿದ್ದರು. ಕೆಲವು ಸೀಮಿತ ಸಲಕರಣೆಗಳಷ್ಟೇ ಇದ್ದಿದ್ದರಿಂದ ಮತ್ತು ಕತ್ತಲಾಗಿದ್ದರಿಂದ ಹೆಚ್ಚಿನ ಹುಡುಕಾಟ ಆಗಿರಲಿಲ್ಲ.

ಮತ್ತೆ ಇಂದು ಬೆಳಗ್ಗೆ ಅಗ್ನಿಶಾಮಕ ದಳ ಸಿಬ್ಬಂದಿ ಮತ್ತೆ ತಾರನಾಳ ಕೆರೆ ಪ್ರದೇಶಕ್ಕೆ ಆಗಮಿಸಿ ಕಾರ್ಯಾಚರಣೆಗೆ ಮುಂದಾದರೂ ಮುಂಜಾನೆ ಊರಿನವೇ ಮೃತದೇಹವನ್ನು ಮೇಲಕ್ಕೆತ್ತಿದ್ದಾರೆ.

# ಕೆಲಸ ಹೇಗೆ ನಡೆಯುತ್ತಿದೆ, ದೇಶದಲ್ಲಿ ಏನಾಗುತ್ತಿದೆ' ದೆಹಲಿಗೆ ಬಂದಿಳಿದ ಕೂಡಲೇ ಬಿಜೆಪಿ ನಾಯಕರನ್ನು ಕೇಳಿ ತಿಳಿದುಕೊಂಡ ಪ್ರಧಾನಿ ಮೋದಿ

**ನವದೆಹಲಿ:** ಅಮೆರಿಕ ಮತ್ತು ಈಜಿಪ್ಟ್ ದೇಶಗಳ ಪ್ರವಾಸ ಯಶಸ್ವಿಯಾಗಿ ಮುಗಿಸಿಕೊಂಡು ಪ್ರಧಾನ ಮಂತ್ರಿ ನರೇಂದ್ರ ಮೋದಿ(PM Narendra Modi) ಇಂದು ಸೋಮವಾರ ನಸುಕಿನ ಜಾವ ದೆಹಲಿಗೆ ಬಂದಿಳಿದರು.

ಅವರನ್ನು ಬಿಜೆಪಿ ರಾಷ್ಟ್ರಾಧ್ಯಕ್ಷ ಜೆ ಪಿ ನಡ್ಡಾ, ದೆಹಲಿಯ ಬಿಜೆಪಿ ಮುಖ್ಯಸ್ಥ ವೀರೇಂದ್ರ ಸಚ್ ದೇವ್, ದೆಹಲಿಯ ಬಿಜೆಪಿ ಸಂಸದರು, ವಿದೇಶಾಂಗ ಇಲಾಖೆ ರಾಜ್ಯ ಸಚಿವೆ ಮೀನಾಕ್ಷಿ ಲೇಖಿ ಮೊದಲಾದವರು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು.



ಅಮೆರಿಕ ಮತ್ತು ಈಜಿಪ್ಟ್ ದೇಶಗಳ ಪ್ರವಾಸ ವೇಳೆ ಪ್ರಧಾನಿಯವರು ಅಪಾರ ಜನಪ್ರಿಯತೆ ಗಳಿಸಿದ್ದು ಮಾತ್ರವಲ್ಲದೆ ವ್ಯಾಪಾರ, ಆಹಾರ ಭದ್ರತೆ, ತಂತ್ರಜ್ಞಾನ ಮತ್ತು ರಕ್ಷಣಾ ಕ್ಷೇತ್ರಗಳಲ್ಲಿ ಹಲವು ಪ್ರಯೋಜನಗಳು ಆಗಿವೆ.

ಪ್ರವಾಸ ಮುಗಿಸಿ ಬಂದಿರುವ ಪ್ರಧಾನಿಯವರು ಇಂದು ವಿಶ್ರಾಂತಿ ತೆಗೆದುಕೊಳ್ಳುತ್ತಿಲ್ಲ. ಬದಲಿಗೆ ಹಲವು ಪ್ರಮುಖ ಸಭೆಗಳು, ಪರಾಮರ್ಶೆ ಸಭೆಗಳಲ್ಲಿ ಭಾಗಿಯಾಗುತ್ತಿದ್ದಾರೆ.

ಭಾರತದಲ್ಲಿ ಏನು ನಡೆಯುತ್ತಿದೆ: ವಿಮಾನ ನಿಲ್ದಾಣದಲ್ಲಿ ಬಂದಿಳಿಯುತ್ತಿದ್ದಂತೆ ಬಿಜೆಪಿ ನಾಯಕರು ಅವರನ್ನು ಗುಲಾಬಿ ನೀಡಿ ಸ್ವಾಗತಿಸಿದರು. ಆಗ ಭಾರತದಲ್ಲಿ ಏನು ನಡೆಯುತ್ತಿದೆ, ಏನಾಗುತ್ತಿದೆ ಎಂದು ಮೋದಿಯವರು ಕೇಳಿದ್ದಾರೆ.

ಅವರು ವಿಮಾನದಲ್ಲಿ ಕೆಳಗಿಳಿಯುತ್ತಿದ್ದಂತೆ ನಮ್ಮನ್ನು ಕೇಳಿದ ಮಾತು ನಾವೆಲ್ಲಾ ಹೇಗೆ ಕೆಲಸ ಮಾಡುತ್ತಿದ್ದೇವೆ ಮತ್ತು ದೇಶದಲ್ಲಿ ಏನಾಗುತ್ತಿದೆ ಎಂದು ದೆಹಲಿಯ ಸಂಸದರೊಬ್ಬರು ಹೇಳಿದರು.

ಕೇಂದ್ರದಲ್ಲಿ ಮೋದಿ ಸರ್ಕಾರ 9 ವರ್ಷ ಆಡಳಿತ ನಡೆಸಿದ ಅಂಗವಾಗಿ ಬಿಜೆಪಿ ಒಂದು ತಿಂಗಳ ಕಾರ್ಯಕ್ರಮ ಹಮ್ಮಿಕೊಂಡಿದ್ದು ಸುಶಾನ್ ಮತ್ತು ಸೇವಾ ಎಂಬ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಜನರ ಬೆಳವಣಿಗೆ ಮತ್ತು ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದೆ. ಬಿಜೆಪಿ ರಾಷ್ಟ್ರಾಧ್ಯಕ್ಷ ನಡ್ಡಾ ಅವರನ್ನು ಪಕ್ಷದ ನಾಯಕರು ಜನರನ್ನು ಹೇಗೆ ತಲುಪುತ್ತಿದ್ದಾರೆ ಎಂದು ಕೇಳಿ ತಿಳಿದುಕೊಂಡರು.

ಸರ್ಕಾರದ ರಿಪೋರ್ಟ್ ಕಾರ್ಡು ಜನರನ್ನು ತಲುಪುತ್ತಿದೆಯೇ ಎಂದು ಕೇಳಿದರು. ಅಲ್ಲದೆ ಜೆ ಪಿ ನಡ್ಡಾ ಅವರ ತೆಲಂಗಾಣ ಭೇಟಿಯ ಬಗ್ಗೆ ಸಹ ಪ್ರಧಾನ ಮಂತ್ರಿಗಳು ಕೇಳಿ ತಿಳಿದುಕೊಂಡರು ಎಂದು ಬಿಜೆಪಿ ಸಂಸದ ಮನೋಜ್ ತಿವಾರಿ ಸುದ್ದಿಗಾರರಿಗೆ ತಿಳಿಸಿದರು.

# ಬೆಂಗಳೂರಿನಲ್ಲಿ ಹಿಟ್ ಆ್ಯಂಡ್ ರನ್‌ಗೆ ವ್ಯಕ್ತಿ ಬಲಿ


**ಬೆಂಗಳೂರು :** ಕಾರು ಡಿಕ್ಕಿಯಾಗಿ ವ್ಯಕ್ತಿಯೋರ್ವ ಸಾವನ್ನಪ್ಪಿರುವ ಘಟನೆ ರಾಜಾಜಿನಗರ ಸಂಚಾರಿ ಠಾಣಾ ವ್ಯಾಪ್ತಿಯಲ್ಲಿ ಭಾನುವಾರ ನಡೆದಿದೆ. ಬೆಳಗ್ಗೆ 10.30ರ ಸುಮಾರಿಗೆ ವ್ಯಕ್ತಿಯೋರ್ವರಿಗೆ ಕಾರು ಡಿಕ್ಕಿಯಾಗಿ ಪರಾರಿಯಾಗಿದೆ. ಮೃತರನ್ನು ಕೃಷ್ಣಪ್ಪ (55) ಎಂದು ಗುರುತಿಸಲಾಗಿದೆ.ಪ್ರಕಾಶ್ ನಗರದ ನಿವಾಸಿಯಾಗಿರುವ ಕೃಷ್ಣಪ್ಪ ಇಂದು ಬೆಳಗ್ಗೆ ರಾಜ್ ಕುಮಾರ್ ರಸ್ತೆ ಕಡೆ ನಡೆದುಕೊಂಡು ಹೋಗುತ್ತಿದ್ದರು.

ಈ ವೇಳೆ ನವರಂಗ್ ಸಿಗ್ನಲ್ ಬಳಿ ಕಾರು ಚಾಲಕ ಯೂಟರ್ನ್ ತೆಗೆಯುವಾಗ ಕೃಷ್ಣ ಪ್ಪ ಅವರಿಗೆ ಡಿಕ್ಕಿ ಹೊಡೆದಿದ್ದಾನೆ. ಡಿಕ್ಕಿ ಹೊಡೆದ ಪರಿಣಾಮ ಕೃಷ್ಣಪ್ಪ ಸ್ಥಳದಲ್ಲೇ ಕುಸಿದುಬಿದ್ದು ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ. ಬಳಿಕ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ಈ ಬಗ್ಗೆ ಪ್ರಕರಣ ದಾಖಲಿಸಿ ಕೊಂಡಿರುವ ರಾಜಾಜಿನಗರ ಸಂಚಾರ ಪೊಲೀಸರು ಪರಾರಿಯಾಗಿದ್ದ ಚಾಲಕನನ್ನು ವಶಕ್ಕೆ ಪಡೆದಿದ್ದಾರೆ.



# ತಂಬಾಕು ನಿಯಂತ್ರಣ ಕ್ರಮಗಳ ಕುರಿತು ಶಾಸಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ: ಅಧಿಕಾರಿಗಳು

**ಬೆಂಗಳೂರು:** ಜೂನ್ 26ರಿಂದ 28ರವರೆಗೆ ಶಾಸಕರಿಗೆ ಓರಿಯಂಟೇಶನ್ ಕಾರ್ಯಕ್ರಮ ನಡೆಯಲಿರುವ ಹಿನ್ನೆಲೆಯಲ್ಲಿ ರಾಜ್ಯ ತಂಬಾಕು ನಿಯಂತ್ರಣ ಕೋಶ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ತಂಬಾಕು ನಿಯಂತ್ರಣ ಕುರಿತು ಅಧಿವೇಶನ ನಡೆಸಲು ಮುಂದಾಗಿದ್ದಾರೆ.



ಈ ಅಧಿವೇಶನವು ವಿವಿಧ ತಂಬಾಕು ನಿಯಂತ್ರಣ ಕ್ರಮಗಳ ಬಗ್ಗೆ ಚುನಾಯಿತ ಪ್ರತಿನಿಧಿಗಳನ್ನು ಸಂವೇದನಾಶೀಲಗೊಳಿಸುವುದು ಮತ್ತು ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ ಇದರಿಂದ ಅವರು ನೀತಿಗಳ ಉತ್ತಮ ಅನುಷ್ಠಾನಕ್ಕೆ ಸಹಾಯ ಮಾಡುತ್ತಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ನೆಲಮಂಗಲದಲ್ಲಿ ಶಾಸಕರಿಗೆ ಮೂರು ದಿನಗಳ ವಿಶೇಷ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. 'ತಂಬಾಕು ನಿಯಂತ್ರಣ ತಜ್ಞರು ನೀತಿಗಳನ್ನು ರೂಪಿಸಲು ಮತ್ತು ನಿರ್ಧಾರಗಳನ್ನು ತೆಗೆದುಕೊಳ್ಳಲು ಶಾಸಕರನ್ನು ಸಂವೇದನಾಶೀಲಗೊಳಿಸಲು ಮೂರು ದಿನಗಳ ಕಾರ್ಯಕ್ರಮದಲ್ಲಿ ಸಮಯ ನಿಗದಿಪಡಿಸುವಂತೆ ನಾವು ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ಅವರಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದೇವೆ' ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

'ರಾಜ್ಯ ಮಟ್ಟದ ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ಕಾಯ್ದೆಗೆ (ಸಿಒಟಿಪಿಎ) ತಿದ್ದುಪಡಿ ತರಬೇಕಾಗಿದೆ. ತಿದ್ದುಪಡಿಯ ಅಗತ್ಯತೆಯ ಬಗ್ಗೆ ಚುನಾಯಿತ ಪ್ರತಿನಿಧಿಗಳು ಸಂವೇದನಾಶೀಲರಾದಾಗ, ಅವರು ಸದನದಲ್ಲಿ ತಿದ್ದುಪಡಿ ಮಸೂದೆಯನ್ನು ಮಂಡಿಸಿದಾಗ ಅಂಗೀಕರಿಸುವುದನ್ನು ಖಚಿತಪಡಿಸಿಕೊಳ್ಳುತ್ತಾರೆ' ಎಂದು ಅಧಿಕಾರಿ ಹೇಳಿದರು.ಹುಕ್ಕಾ ಬಾರ್‌ಗಳನ್ನು ನಿಷೇಧಿಸುವ ಬಗ್ಗೆ, ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳಲ್ಲಿ ಗೊತ್ತುಪಡಿಸಿದ ಧೂಮ ಪಾನ ಪ್ರದೇಶವನ್ನು ಒದಗಿಸುವುದು ಮತ್ತು ಎಲ್ಲಾ ರೀತಿಯ ತಂಬಾಕು ಜಾಹೀರಾತುಗಳನ್ನು ನಿಷೇಧಿಸುವ ಬಗ್ಗೆ ಚುನಾಯಿತ ಪ್ರತಿನಿಧಿಗಳ ಗಮನ ಸೆಳೆಯಲು ನಾವು ಬಯಸುತ್ತೇವೆ ಎಂದರು.

ಇದಲ್ಲದೆ, ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಲು ಮಾರಾಟಗಾರರು ಪರವಾನಗಿಯನ್ನು ಪಡೆಯುವುದನ್ನು ಕಡ್ಡಾಯಗೊಳಿಸುವುದನ್ನು ಅವರು ಬಯಸುತ್ತಾರೆ ಎಂದು ಅಧಿಕಾರಿ ಹೇಳಿದರು. ರಾಜ್ಯ ತಂಬಾಕು ನಿಯಂತ್ರಣ ಕೋಶದ ನೇತೃತ್ವದಲ್ಲಿ ಇತರ ತಂಬಾಕು ನಿಯಂತ್ರಣ ತಜ್ಞರಾದ ಆಂಕೊಲಾಜಿಸ್ಟ್ ಡಾ.ವಿಶಾಲ್ ರಾವ್ ಮತ್ತು ಇತರರು ಶಾಸಕರಿಗೆ ಅಧಿವೇಶನವನ್ನು ನಡೆಸುವ ಸಾಧ್ಯತೆಯಿದೆ.

# ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಾಣಿಕೆ ವಿರೋಧಿ ದಿನ ಆಚರಣೆ: ವಾಕಥಾನ್ ನಲ್ಲಿ ಪಾಲ್ಗೊಂಡ ಡಿಸಿಎಂ

**ಬೆಂಗಳೂರು:** ಮಾದಕ ವಸ್ತುಗಳ ದುರ್ಬಳಕೆ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧದ ಅಂತಾರಾಷ್ಟ್ರೀಯ ದಿನವನ್ನು ವಿಶ್ವ ಮಾದಕ ವಸ್ತು ಬಳಕೆ ವಿರೋಧಿ ದಿನ ಎಂದು ಕರೆಯಲಾಗುತ್ತದೆ. (International Day against Drug abuse and illicit trafficking).ಇದನ್ನು ಪ್ರತಿ ವರ್ಷ ಜೂನ್ 26 ರಂದು ಮಾದಕ ವ್ಯಸನ ಮುಕ್ತ ಜಗತ್ತನ್ನು ನಿರ್ಮಿಸಲು ಕ್ರಮ ಮತ್ತು ಸಹಕಾರವನ್ನು ಬಲಪಡಿಸಲು ಆಚರಿಲಾಗುತ್ತದೆ. ಪ್ರತಿ ವರ್ಷ ಪ್ರಪಂಚದಾದ್ಯಂತದ ವಿವಿಧ ಸಂಸ್ಥೆಗಳು ವಿಶ್ವ ಮಾದಕ ವಸ್ತು ದಿನವನ್ನು ಆಚರಿಸುತ್ತವೆ. ಜೊತೆಗೆ ಸಮಾಜಕ್ಕೆ ನಿಷೇಧಿತ ಮಾದಕವಸ್ತುಗಳು ಉಂಟು ಮಾಡುವ ಪ್ರಮುಖ ಸಮಸ್ಯೆಯ ಬಗ್ಗೆ ಜಾಗೃತಿ ಮೂಡಿಸುತ್ತವೆ.






1987 ಡಿಸೆಂಬರ್ 7ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಜೂನ್ 26 ಅನ್ನು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಕಾನೂನು ಬಾಹಿರ ಸಾಗಾಟ ವಿರೋಧಿ ದಿನ ಎಂದು ಘೋಷಿ ಸಲಾಯಿತು.

ವಿಶ್ವದಾದ್ಯಂತ ಈ ದುಶ್ಚಟಗಳಿಗೆ ಇತ್ತೀಚಿನ ವರ್ಷಗಳಲ್ಲಿ ಮಕ್ಕಳು ಮತ್ತು ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ. ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣೆ ಕಾನೂನ ಬಾಹಿರ ಎಂದು ಗೊತ್ತಿದ್ದರೂ ಇದರ ದಂಧೆ ಎಗ್ಗಿಲ್ಲದೆ ನಡೆಯುತ್ತಿದೆ. ಡ್ರಗ್ ಮಾಫಿಯಾ ಹತೋಟಿಗೆ ತರಲು ವಿಶ್ವದೆಲ್ಲೆಡೆ ಕಾನೂನು ಪ್ರಯತ್ನಗಳು ನಡೆಯುತ್ತಿವೆ. ಆದರೆ ಇದನ್ನು ಬುಡ ಸಮೇತ ಕಿತ್ತು ಹಾಕಲು ಸಾಧ್ಯವಾಗಿಲ್ಲ.

ವಾಕಥಾನ್ ಗೆ ಡಿಸಿಎಂ ಚಾಲನೆ: ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಾಣಿಕೆ ವಿರೋಧಿ ದಿನದ ಅಂಗವಾಗಿ ಇಂದು ವಿಧಾನಸೌಧ ಮುಂದೆ ಡಿಸಿಎಂ ಡಿ ಕೆ ಶಿವಕುಮಾರ್ ಚಾಲನೆ ನೀಡಿದರು. ನಂತರ ವಿಧಾನಸೌಧದಿಂದ ಕಂಠೀರವ ಸ್ಟೇಡಿಯಂ ವರೆಗೂ ಮಕ್ಕಳೊಂದಿಗೆ ಪಾದ ಯಾತ್ರೆಯಲ್ಲಿ ಪಾಲ್ಗೊಂಡರು. ಉತ್ತಮ ಸಮಾಜಕ್ಕೆ ಯುವ ಶಕ್ತಿಯೇ ಆಧಾರ ಸ್ತಂಭ. ಆದರೆ ಡ್ರಗ್ಸ್ ಚಟದಿಂದಾಗಿ ಯುವಶಕ್ತಿಯು ತಪ್ಪು ದಾರಿ ಹಿಡಿಯುತ್ತಿದೆ. ಯುವಕರಲ್ಲಿ ಜಾಗೃತಿ ಮೂಡಿಸುವ ಇಂತಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಕ್ಕಳೊಂದಿಗೆ ಹೆಜ್ಜೆ ಹಾಕುವುದು ನನಗೆ ತುಂಬಾ ಖುಷಿ ನೀಡಿದೆ ಎಂದು ನೆರೆದಿದ್ದ ಮಕ್ಕಳಿಗೆ, ಜನಸಮೂಹ, ಯುವಜನತೆಗೆ ಶಿವಕುಮಾರ್ ಸಂದೇಶ ನೀಡಿದರು.ಅಮಿತ್ ಶಾ ಸಂದೇಶ: ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತಾರಾಷ್ಟ್ರೀಯ ದಿನದಂದು, ಮಾದಕ ದ್ರವ್ಯ ಪಿಡುಗಿನ ವಿರುದ್ಧ ದಿಟ್ಟತನದ ಹೋರಾಟವನ್ನು ನಡೆಸಿದ ಎಲ್ಲಾ ಮಾದಕ ದ್ರವ್ಯ ವಿರೋಧಿ ಯೋಧರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಶುಭಾಶಯ ತಿಳಿಸಿದ್ದಾರೆ.

# ಉಚಿತ ವಿದ್ಯುತ್: ಗೃಹಜ್ಯೋತಿ ಯೋಜನೆಗೆ 51 ಲಕ್ಷಕ್ಕೂ ಹೆಚ್ಚು ಗ್ರಾಹಕರು ನೋಂದಣಿ

**ಬೆಂಗಳೂರು:** ರಾಜ್ಯ ಸರ್ಕಾರದ ಐದು ಗ್ಯಾರಂಟಿಗಳಲ್ಲಿ ಒಂದಾದ ಗೃಹಜ್ಯೋತಿ ಯೋಜನೆ ಅಡಿ ಉಚಿತ ವಿದ್ಯುತ್ ಗೆ ನೋಂದಣಿ ಮಾಡಿಸಿಕೊಳ್ಳುವವರ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಭಾನುವಾರ ನೋಂದಣಿ ಮಾಡಿಕೊಂಡ ಗ್ರಾಹಕರ ಸಂಖ್ಯೆ 51 ಲಕ್ಷ ದಾಟಿದೆ ಎಂದು ಇಂಧನ ಇಲಾಖೆ ತಿಳಿಸಿದೆ.ಸರ್ವರ್ ಸಮಸ್ಯೆ ನಡುವೆ ಯೂ ಗೃಹ ಜ್ಯೋ?ತಿ ಯೋಜನೆಗೆ ಕಳೆದ ಏಳು ದಿನಗಳಲ್ಲಿ ಒಟ್ಟು 51,17,692 ಲಕ್ಷ ಗ್ರಾಹಕರು ನೋಂದಣಿ ಮಾಡಿ ಕೊಂಡಿದ್ದಾರೆ.



ಈ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದ್ದು, ಗೃಹ ಜ್ಯೋತಿ ನೋಂದಣಿಯು ಇನ್ನಷ್ಟು ವೇಗ ಪಡೆದುಕೊಂಡಿದ್ದು, ಭಾನುವಾರ ರಾತ್ರಿ 8 ಗಂಟೆವರೆಗೆ 51,17,692 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಇಂಧನದ ಇಲಾಖೆ ತಿಳಿಸಿದೆ.ಇ-ಆಡಳಿತ ಇಲಾಖೆ ಪ್ರತ್ಯೇಕ ನೋಂದಣಿ ಲಿಂಕ್ ಅನ್ನು ರಾಜ್ಯದ 2,000 ವಿದ್ಯುಚ್ಛಕ್ತಿ ಕಚೇರಿಗಳಿಗೆ ನೀಡಿದ ನಂತರ ನೋಂದಣಿ ಪ್ರಕ್ರಿಯೆ ವೇಗ ಪಡೆದು ಕೊಂಡಿದ್ದು, ಶುಕ್ರವಾರ (ಜೂನ್ 23) 10,93, 606 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದರು. ಶನಿವಾರ(ಜೂನ್ 24) ಸಂಜೆ 8 ಗಂಟೆ ಯವರೆಗೆ 11,17,208 ಗ್ರಾಹಕರು ಯೋಜನೆಗೆ ನೋಂದಣಿ ಮಾಡಿ ಕೊಂಡಿದ್ದಾರೆ.

# ಅನ್ನಭಾಗ್ಯ ಯೋಜನೆ: ರಾಜ್ಯಕ್ಕೆ ಅಕ್ಕಿ ನೀಡಲು 3 ಕೇಂದ್ರೀಯ ಸಂಸ್ಥೆಗಳ ತಾತ್ವಿಕ ಒಪ್ಪಿಗೆ

**ಬೆಂಗಳೂರು:** ಅನ್ನಭಾಗ್ಯ ಯೋಜನೆ ಘೋಷಣೆ ಮಾಡಿ ಅಕ್ಕಿ ಸಿಗದೆ ಸಂಕಷ್ಟಕ್ಕೆ ಸಿಲುಕಿದ್ದ ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ನೆರವು ನೀಡಲು 3 ಕೇಂದ್ರೀಯ ಸಂಸ್ಥೆಗಳು ಮುಂದೆ ಬಂದಿವೆ.

ಕೇಂದ್ರೀಯ ಸ್ವಾಮ್ಯದ ಮೂರು ಸಂಸ್ಥೆಗಳಾದ ರಾಷ್ಟ್ರೀಯ ಗ್ರಾಹಕರ ಸಹಕಾರ ಒಕ್ಕೂಟ (ಎನ್ ಸಿಸಿಎಫ್), ರಾಷ್ಟ್ರೀಯ ಕೃಷಿ ಸಹಕಾರ ಮಾರುಕಟ್ಟೆ ಮಹಾಮಂಡಳ (ನಾಫೆಡ್) ಮತ್ತು ಭಾರತೀಯ ಆಹಾರ ನಿಗಮ (ಎಫ್ ಸಿಐ) ರಾಜ್ಯ ಸರ್ಕಾರಕ್ಕೆ ಅಕ್ಕಿ ನೀಡಲು ತಾತ್ವಿಕ ಒಪ್ಪಿಗೆ ನೀಡಿವೆ ಎಂದು ತಿಳಿದುಬಂದಿದೆ.



ಆದರೆ, ಮೂರು ಸಂಸ್ಥೆಗಳ ಅಕ್ಕಿಯ ದರ ಬಲು ದುಬಾರಿಯಾಗಿದ್ದು, ಸಾಗಾಣಿಕೆ ವೆಚ್ಚ ಸೇರಿ ಪ್ರತಿ ಕೆ.ಜಿ ಗೆ 40 ರೂ. ಅಧಿಕ ದಾಟುವ ಸಾಧ್ಯತೆ ಎಂದು ಹೇಳಲಾಗುತ್ತಿದೆ. ಇದು ಈಅಖ ಪೂರೈಕೆ ಮಾಡುತ್ತಿದ್ದ ದರಕ್ಕಿಂತ ಹೆಚ್ಚಾಗಲಿದೆ ಎನ್ನಲಾಗಿದೆ.

ಶನಿವಾವರಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಯಿತು. ಸಭೆಯಲ್ಲಿ ಕೇಂದ್ರೀಯ ಸಂಸ್ಥೆಗಳ ಅಧಿಕಾರಿಗಳು ಭಾಗಿಯಾಗಿದ್ದರು.

ಮಾತುಕತೆ ವೇಳೆ ಪ್ರತಿ ಕೆಜಿಗೆ ರೂ.34ರಂತೆ ಅಕ್ಕಿ ಖರೀದಿ ಮಾಡಲು ಸರ್ಕಾರ ಒಪ್ಪಿಗೆ ಸೂಚಿಸಿದೆ. ಆದರೆ, ರಾಜ್ಯ ಸರ್ಕಾರವೇ ಸಾರಿಗೆ ವೆಚ್ಚವನ್ನು ಭರಿಸಬೇಕಾಗಿದ್ದು, ಏಜೆನ್ಸಿಗಳಿಗೆ ಸುಮಾರು 1 ಪ್ರತಿಶತದಷ್ಟು ಕಮಿಷನ್ ಅನ್ನು ಪಾವತಿಸಬೇಕಾಗುತ್ತದೆ ಎಂದು ಮೂಲಗಳು ತಿಳಿಸಿವೆ.

ಈ ಸಭೆಗೂ ಮುನ್ನ ಸಚಿವ ಮುನಿಯಪ್ಪ ಅವರು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿತ ವಿತರಣಾ ಸಚಿವ ಪಿಯೂಷ್ ಗೋಯಲ್ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಿ, ಅನ್ನಭಾಗ್ಯ ಯೋಜನೆಗೆ ಅಕ್ಕಿ ಒದಗಿಸುವಂತೆ ಮನವಿ ಮಾಡಿಕೊಂಡಿದ್ದರು. ಆದರೆ, ಇದಕ್ಕೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡಿರಲಿಲ್ಲ.

# ಅಹಲ್ಯಾದೇವಿ ಹೋಳ್ಕರ್‌ರ 298ನೇ ಜನ್ಮದಿನಾಚರಣೆ ಇಂದೋರ್‌ನಲ್ಲಿ ಕನ್ನಡದಲ್ಲಿಯೇ ಭಾಷಣ ಮಾಡಿದ ಸಿದ್ದರಾಮಯ್ಯ

**ಬಾರಾಮತಿ:** ಮಹಿಳೆಯರಿಗೆ ಶಿಕ್ಷಣ ನೀಡಿ ಆರ್ಥಿಕವಾಗಿ ಸ್ವಾವಲಂಬಿ ಯಾಗುವಂತೆ ಮಾಡುವುದು ಇಂದೋರ್ ರಾಜ್ಯದ 18ನೇ ಶತ ಮಾನದ ಪೌರಾಣಿಕ ಆಡಳಿತಗಾರ್ತಿ ಅಹಲ್ಯಾದೇವಿ ಹೋಳ್ಕರ್ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಹೇಳಿ ದ್ದಾರೆ.

ಹೋಳ್ಕರ್ ಅವರ 298ನೇ ಜನ್ಮದಿನಾಚರಣೆ ಅಂಗವಾಗಿ ಪುಣೆ ಜಿಲ್ಲೆಯ ಬಾರಾಮತಿ ಪಟ್ಟಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಅವರು ಮಾತನಾಡಿದರು.



ಕನ್ನಡದಲ್ಲಿಯೇ ಭಾಷಣ ಮಾಡಿದ ಸಿದ್ದರಾಮಯ್ಯ ಅವರು, ಹೋಳ್ಕರ್ ಅವರ ಜೀವನ ಮತ್ತು ಸಮಯವನ್ನು ನೆನಪಿಸಿಕೊಂಡರು. ಮಹಿಳೆಯರಿಗೆ ಶಿಕ್ಷಣ ನೀಡಿ ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡುವುದೇ ಅಹಲ್ಯಾದೇವಿ ಹೋಳ್ಕರ್ ಅವರಿಗೆ ಸಲ್ಲಿಸುವ ನಿಜವಾದ ಶ್ರದ್ಧಾಂಜಲಿ ಎಂದರು.

'ಕರ್ನಾಟಕದಾದ್ಯಂತ ಮಹಿಳೆ ಯರಿಗೆ ಉಚಿತ ಬಸ್ ಪ್ರಯಾಣ ವನ್ನು ಘೋಷಿಸುವ ಮೂಲಕ ಈ ಗುರಿಯನ್ನು ಸಾಧಿಸಲು ನಾವು ಕೆಲವು ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ಅಲ್ಲದೆ, ಕುಟುಂಬದ ಮುಖ್ಯಸ್ಥೆಯಾಗಿರುವ ಮಹಿಳೆಯರ ಬ್ಯಾಂಕ್ ಖಾತೆಗೆ ತಿಂಗಳಿಗೆ 2,000 ರೂ. ಹಾಕುತ್ತೇವೆ ಎಂದರು.

ಕರ್ನಾಟಕ ಸಿಎಂ ಅವರು ಪ್ರಮಾಣ ವಚನ ಸ್ವೀಕರಿಸಿದ 24 ಗಂಟೆಗಳಲ್ಲಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಭರವಸೆಯನ್ನು ಜಾರಿಗೆ ತಂದರು. ಆದರೆ, ಈ ವರ್ಷ ಆಗಸ್ಟ್ 15 ರಿಂದ ತಿಂಗಳಿಗೆ 2,000 ರೂ. ಖಾತೆಗೆ ಹಾಕುವ ಭರವಸೆ ನೀಡಿದ್ದಾರೆ.

ಮಹಾರಾಷ್ಟ್ರದಲ್ಲಿ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ನ್ಯಾಶನಲಿಸ್ಟ್ ಕಾಂಗ್ರೆಸ್ ಪಕ್ಷ (ಎನ್‌ಸಿಪಿ) ಜಯ ಗಳಿಸಲಿದೆ ಎಂದ ಅವರು, ರಾಜ್ಯ ದಲ್ಲಿ ಮಹಿಳೆಯರಿಗೆ ಈ ಯೋಜನೆಗಳನ್ನು ಜಾರಿಗೊಳಿ ಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್, ಅವರ ಪುತ್ರಿ ಮತ್ತು ಪಕ್ಷದ ಕಾರ್ಯಾಧ್ಯಕ್ಷೆ ಸುಪ್ರಿಯಾ ಸುಳೆ, ಮಹಾರಾಷ್ಟ್ರ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಅಜಿತ್ ಪವಾರ್ ಮತ್ತು ಹಿರಿಯ ಕಾಂಗ್ರೆಸ್ ನಾಯಕ ಬಾಳಾಸಾ ಹೇಬ್ ಥೋರಟ್ ಉಪಸ್ಥಿ ತರಿದ್ದರು.

# ನಿವೇಶನ ನೀಡುವುದಾಗಿ ನಂಬಿಸಿ ನಟ ಮಾಸ್ಟರ್ ಆನಂದ್‌ಗೆ ವಂಚಿಸಿದ ಖಾಸಗಿ ಕಂಪನಿ; ದೂರು ದಾಖಲು!

**ಬೆಂಗಳೂರು:** ನಿವೇಶನ ಕೊಡಿಸುವುದಾಗಿ ನಂಬಿಸಿ ರಿಯಲ್ ಎಸ್ಟೇಟ್ ಸಂಸ್ಥೆಯ ಮಾಲೀಕ ಹಾಗೂ ಮತ್ತೊಬ್ಬ ವ್ಯಕ್ತಿಯು 18.5 ಲಕ್ಷ ರೂಪಾಯಿ ವಂಚಿಸಿದ್ದಾರೆ ಎಂದು ಕನ್ನಡದ ನಟ ಮಾಸ್ಟರ್ ಆನಂದ್ ಹೆಚ್ ಪೊಲೀಸರಿಗೆ ದೂರು ನೀಡಿದ್ದಾರೆ.

ಮಲ್ಟಿ ಲೀಪ್ ವೆಂಚರ್ಸ್ ಪ್ರೈವೇಟ್ ಲಿಮಿಟೆಡ್ ಮಾಲೀಕ ಸುಧೀರ್ ಎಸ್ ಮತ್ತು ಅವರ ಆಪ್ತ ಸಹಾಯಕಿ ಮಣಿಕಾ ಕೆಎಂ ವಿರುದ್ಧ ನಟ ಮಾಸ್ಟರ್ ಆನಂದ್ ಜೂನ್ 23 ರಂದು ಚಂದ್ರಾ ಲೇಔಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕೆಂಗೇರಿಯ ಕೊಮ್ಮಘಟ್ಟದಲ್ಲಿ ಗೇಟೆಡ್ ಕಮ್ಯುನಿಟಿಯಲ್ಲಿ ನಿವೇಶನ ನೀಡುವುದಾಗಿ ಭರವಸೆ ನೀಡಿದ್ದು, ಮುಂಗಡವಾಗಿ 18.5 ಲಕ್ಷ ರೂ. ಪಾವತಿಸಿರುವುದಾಗಿ ಆನಂದ್ ಹೇಳಿದ್ದಾರೆ.



ಎಫ್‌ಐಆರ್ ಪ್ರಕಾರ, ಆನಂದ್ ಅವರು ಜುಲೈ 2020 ರಲ್ಲಿ ಚಲನಚಿತ್ರ ಚಿತ್ರೀಕರಣಕ್ಕಾಗಿ ಕೊಮ್ಮಘಟ್ಟದ ರಾಮಸಂದ್ರಕ್ಕೆ ಭೇಟಿ ನೀಡಿದಾಗ 'ಮಾರಾಟಕ್ಕಿವೆ' ಎಂಬ ಫಲಕಗಳೊಂದಿಗೆ ಖಾಲಿ ನಿವೇಶನಗಳನ್ನು ನೋಡಿದ್ದಾರೆ.

ಈ ವೇಳೆ ಅವರ ವಿಚಾರಣೆಗೆ ಪ್ರತಿಕ್ರಿಯೆಯಾಗಿ, ಸಂಸ್ಥೆಯ ಮಾರ್ಕೆಟಿಂಗ್ ಕಛೇರಿಯಲ್ಲಿ ಮಣಿಕಾ ಮತ್ತು ಸುಧೀರ್ ಎಂಬುವವರು ಆನಂದ್ ಅವರಿಗೆ ಎಲ್ಲಾ ವಿವರಗಳನ್ನು ನೀಡಿದ್ದಾರೆ ಮತ್ತು ಕೊಡುಗೆಗಳನ್ನು ವಿವರಿಸಿದ್ದಾರೆ. ಆನಂದ್ ತಾನು ಈ ಬಗ್ಗೆ ನಿರ್ಧಾರ ತೆಗೆದು ಕೊಂಡು ಹಿಂದಿರುವುದಾಗಿ ತಿಳಿಸಿ ಅಲ್ಲಿಂದ ಹೊರಟಿದ್ದಾರೆ.

ಆದರೆ, ಮಣಿಕಾ ಮತ್ತು ಸುಧೀರ್ ಅವರಿಗೆ ಕರೆ ಮಾಡಿ ಅತ್ಯಾಕರ್ಷಕ ಸಾಲ ಯೋಜನೆಗಳ ಆಮಿಷ ಒಡ್ಡಿದ್ದಾರೆ. ಈ ಆಫರ್‌ನಿಂದ ಆಕರ್ಷಿತರಾದ ಅವರು ನಿವೇಶನ ಖರೀದಿಸಲು ಒಪ್ಪಿಕೊಂಡಿದ್ದಾರೆ. ಮಾತುಕತೆಯ ನಂತರ 70 ಲಕ್ಷ ರೂ.ಗೆ ಒಪ್ಪಂದ ವನ್ನು ಅಂತಿಮಗೊಳಿಸಲಾಯಿತು ಮತ್ತು ಖರೀದಿ ಕರಾರು ಪತ್ರವನ್ನು ನೀಡಲಾಯಿತು.

ಸೆಪ್ಟೆಂಬರ್ 2020 ಮತ್ತು ನವೆಂಬರ್ 2020 ರ ನಡುವೆ, ನಟ ಅವರಿಗೆ ನಾಲ್ಕು ಕಂತುಗಳಲ್ಲಿ 18.5 ಲಕ್ಷ ರೂ. ನೀಡಿದ್ದಾರೆ.

ಒಪ್ಪಂದದಲ್ಲಿ ನಮೂದಿಸಿರುವ ಬಾಕಿ ಪಾವತಿಗೆ ಸುಧೀರ್ ಅವರು ಸಾಲ ಮಂಜೂರು ಮಾಡುವುದನ್ನೇ ಅವರು ಕಾಯುತ್ತಿದ್ದರು.

ಆದರೆ, ಸುಧೀರ್ ಸಾಲ ಕೊಡಿಸುವಲ್ಲಿ ವಿಫಲರಾಗಿದ್ದಾರೆ. ನಂತರ ಆ ನಿವೇಶನವನ್ನು ಬೇರೆಯವರಿಗೆ ಮಾರಾಟ ಮಾಡಿರುವುದು ತಿಳಿದುಬಂದಿದೆ ಎಂದು ಆನಂದ್ ಆರೋಪಿಸಿದ್ದಾರೆ.

ಪೊಲೀಸರು ಐಪಿಸಿಯ ವಿವಿಧ ಸೆಕ್ಷನ್‌ಗಳು ಮತ್ತು ನಿಯಂತ್ರಿತ ಠೇವಣಿ ಯೋಜನೆಗಳ ನಿಷೇಧ ಕಾಯ್ದೆ, 2019 ರ ಅಡಿಯಲ್ಲಿ ಪ್ರಕರಣ ದಾಖಲಿ ಸಿದ್ದಾರೆ ಮತ್ತು ತನಿಖೆಯನ್ನು ಪ್ರಾರಂಭಿಸಿದ್ದಾರೆ.

